ಸಂಪುಟ : 10 ಸಂಚಿಕೆ: 32 ಪುಟ : 4+2 ಬೆಲೆ: 3.00 ರವಿವಾರ ಮಾರ್ಚ 2 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 32 Pages : 4+2 Price : 3.00 Sunday March 2 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಹಜ ಶಿವಯೋಗ ಕುರಿತು ಉಪನ್ಯಾಸ ಇಂದು



**■ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮಾರ್ಚ್ 2ರಂದು ಬೆಳಿಗ್ಗೆ 7.30ಕ್ಕೆ ನಡೆಯಲಿರುವ ಬಸವದಳದ 1635ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ ತ್ರಿಪದಿ ಕವಿ ಸರ್ವಜ್ಞನವರ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಸಾಹಿತ್ಯ ಚಿಂತಕ ಶರಣ ಎಸ್.ಎ. ಮುಗದ ಸಹಜ ಶಿವಯೋಗ ಮಾಡುವರು. ಶರಣೆ ನೀಲಲೋಚನಾ ಸಿ. ಹಂಚಿನಾಳ ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಕಾರು-ಬೈಕ್ ಮುಖಾಮುಖಿ ಡಿಕ್ಕಿ: ಇಬ್ಬರು ಸವಾರರು ಸಾವು!

**■ವಿಜಯಸಾಕ್ಷಿ ಸುದ್ದಿ, ವಿಜಯಪುರ**

ಕಾರು ಬೈಕ್ ನಡುವೆ ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಸವಾರರು ಸ್ಥಳದಲ್ಲೆ ಸಾವನ್ನಪ್ಪಿದ ಘಟನೆ ವಿಜಯಪುರ ಜಿಲ್ಲೆಯ ದೇವರಹಿಪ್ಪರಗಿಯ ಬಸವನ ಬಾಗೇವಾಡಿ ರಸ್ತೆಯಲ್ಲಿ ಜರುಗಿದೆ.

ಆರೀಪ್ ವಡ್ಡೋಡಗಿ (35), ಮೈಬೂಬ್‌ಸಾಬ್ ಕರಜಗಿ (65) ಸ್ಥಳದಲ್ಲೆ ಸಾವನ್ನಪ್ಪಿದ ದುರ್ದೈವಿಗಳು. ಹೂವಿನ ಹಿಪ್ಪರಗಿಯಿಂದ ದೇವರಹಿಪ್ಪರಗಿ ಕಡೆಗೆ ಬೈಕ್ ಸವಾರರು ಬರ್ತಿದ್ದರು. ಇದೇ ವೇಳೆ ಬಸವನ ಬಾಗೇವಾಡಿ ಕಡೆಗೆ ಹೊರಟಿದ್ದ ಕಾರು ಮುಖಾಮುಖಿ ಡಿಕ್ಕಿ ಹೊಡೆದ ಪರಿಣಾಮ ಈ ಅವಘಡ ಸಂಭವಿಸಿದೆ.

ಬೈಕ್ ಡಿಕ್ಕಿ ಹೊಡೆದ ಬಳಿಕ ಕಾರು ಸಮೇತ ಚಾಲಕ ಪರಾರಿ ಆಗಿದ್ದಾನೆ. ಸ್ಥಳಕ್ಕೆ ದೇವರಹಿಪ್ಪರಗಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಹಾಗೂ ಪ್ರಕರಣ ದಾಖಲಿಸಿಕೊಂಡು ಕಾರು ಚಾಲಕನಿಗಾಗಿ ಹುಡುಕಾಟ ನಡೆಸಿದ್ದಾರೆ.

### ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳಕ್ಕೆ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಚಾಲನೆ

# ಶಿಕ್ಷಣಕ್ಕೆ ಅನುಗುಣವಾಗಿ ಉದ್ಯೋಗಾವಕಾಶ

**■ವಿಜಯಸಾಕ್ಷಿ ಸುದ್ದಿ, ಗದಗ**

ಅಭ್ಯರ್ಥಿಗಳ ಆಸಕ್ತಿ ಹಾಗೂ ಶಿಕ್ಷಣಕ್ಕನುಗುಣವಾಗಿ ಉದ್ಯೋಗ ಪಡೆಯಲು ಎರಡು ದಿನಗಳ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳ ಆಯೋಜಿಸಲಾಗಿದ್ದು, ಇದರ ಸದುಪಯೋಗವನ್ನು ಜಿಲ್ಲೆಯ ನಿರುದ್ಯೋಗಿ ಯುವಜನತೆ ಪಡೆಯಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು. ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಶನಿವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಇವರ ಸಹಯೋಗದೊಂದಿಗೆ ಸಂಕಲ್ಪ ಯೋಜನೆಯಡಿ ಆಯೋಜಿಸಲಾದ ಎರಡು ದಿನಗಳ ಗದಗ ಜಿಲ್ಲಾ ಮಟ್ಟದ ಉದ್ಯೋಗ ಮೇಳ -2025ನ್ನು ಉದ್ಘಾಟಿಸಿ ಅವರು ಮಾತನಾಡಿದರು. ಉದ್ಯೋಗ ಮೇಳದಲ್ಲಿ ಈವರೆಗೆ 6243 ಅಭ್ಯರ್ಥಿಗಳು ನೋಂದಣಿ ಮಾಡಿಕೊಂಡಿದ್ದಾರೆ. ಇನ್ನೂ ನೋಂದಣಿ ನಡೆದಿದೆ ಎಂದರಲ್ಲದೆ, ಉದ್ಯೋಗ ಮೇಳದ ಉದ್ದೇಶ ಈಡೇರಿಕೆಗಾಗಿ ವೈಜ್ಞಾನಿಕವಾಗಿ ಶ್ರಮವಹಿಸಿದ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರನ್ನು ಸಚಿವ ಎಚ್.ಕೆ. ಪಾಟೀಲ ಪ್ರಶಂಸಿಸಿದರು.

> ಕೇಂದ್ರ ಸರ್ಕಾರ ಸ್ಕಿಲ್ ಇಂಡಿಯಾ, ಸ್ಟಾರ್ಟ್ ಅಪ್ ಇಂಡಿಯಾ ಸೇರಿದಂತೆ ಹಲವಾರು ಯೋಜನೆಗಳ ಜಾರಿ ಮೂಲಕ ಉದ್ಯಮಿಗಳಾಗಲು ಉದ್ಯೋಗ ಪಡೆಯಲು ಸಹಕಾರಿಯಾಗಿದೆ. ಗ್ರಾಮೀಣ ಯುವಜನರಲ್ಲಿರಲ್ಲಿ ಕೌಶಲ್ಯ ಹಾಗೂ ಕಮ್ಯುನಿಕೇಶನ್ ಅಗತ್ಯವಿದೆಯೆಂದು ವಿ.ಪ ಸದಸ್ಯ ಎಸ್.ವಿ. ಸಂಕನೂರ ಅಭಿಪ್ರಾಯಪಟ್ಟರು.



ಅಭ್ಯರ್ಥಿಗಳಾದ ಭೀಮಾಂಬಿಕಾ, ಪ್ರಶಾಂತ ಮಾಚೇನಹಳ್ಳಿ, ಮಂಜುಳಾ ಕಟಗಿಲಿ ಹಾಗೂ ಆನಂದ ಸಿದ್ನಿಕೊಪ್ಪ ಅವರುಗಳಿಗೆ ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರು ಸಂಸ್ಥೆಗಳಿಂದ ಉದ್ಯೋಗ ಆಯ್ಕೆ ಪತ್ರಗಳನ್ನು ವಿತರಿಸಿದರು. ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಎಸ್.ವಿ. ಸಂಕನೂರ ಪಾಲ್ಗೊಂಡು ಮಾತನಾಡಿ, ಗದಗನಲ್ಲಿ ಬೃಹತ್ ಪ್ರಮಾಣದಲ್ಲಿ ಉದ್ಯೋಗ ಮೇಳ ಆಯೋಜಿಸಿದ್ದಕ್ಕಾಗಿ ಜಿಲ್ಲಾಡಳಿತ, ಸರ್ಕಾರ ಹಾಗೂ ಸಚಿವರಾದ ಎಚ್.ಕೆ. ಪಾಟೀಲ ಅವರಿಗೆ ಅಭಿನಂದನೆಗಳನ್ನು ತಿಳಿಸಿದರಲ್ಲದೆ, ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಸರ್ಕಾರ ಪ್ರಯತ್ನಿಸುತ್ತಿದೆ.

> ನಿರುದ್ಯೋಗ ಸಮಸ್ಯೆ ನಿವಾರಣೆಗಾಗಿ ಉದ್ಯೋಗ ಮೇಳ ಆಯೋಜಿಸಲಾಗಿದೆ. ನಮ್ಮ ನಿರೀಕ್ಷೆಗೂ ಮೀರಿ 64ಕ್ಕೂ ಅಧಿಕ ಸಂಸ್ಥೆಯ ಉದ್ಯೋಗದಾತರು ಆಗಮಿಸಿದ್ದು, ಅಭ್ಯರ್ಥಿಗಳು ಇದರ ಪ್ರಯೋಜನ ಪಡೆಯಬೇಕು. ಗದಗ ಜಿಲ್ಲೆಯ ಯುವ ಜನತೆ ಆಧುನಿಕ ಕೃಷಿ, ಆಹಾರ ತಯಾರಿಕೆ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ನೈಪುಣ್ಯತೆಯನ್ನು ಸಾಧಿಸಿದ್ದಾರೆ. ಅವರಿಗೆ ಉದ್ಯೋಗದಾತರು ಕೆಲಸ ನೀಡಿದಲ್ಲಿ ನಿಮ್ಮ ಸಂಸ್ಥೆಯ ಅಭಿವೃದ್ಧಿಗೆ ಹೆಚ್ಚು ಸಹಕಾರಿಯಾಗಲಿದೆ.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

▸▸ 3ನೇ ಪುಟಕ್ಕೆ

### ತೋಟಗಾರಿಕಾ ಮಹಾವಿದ್ಯಾಲಯ ಸ್ಥಾಪನೆಗೆ ಸರ್ಕಾರಕ್ಕೆ ಪೂರಕ ವರದಿ ಸಲ್ಲಿಕೆ: ಜಿ.ಎಸ್. ಪಾಟೀಲ

# ತೋಟಗಾರಿಕೆ ಕಾಲೇಜ್ ಆದಲ್ಲಿ ಅಭಿವೃದ್ಧಿ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ತೋಟಗಾರಿಕಾ ಮಹಾವಿದ್ಯಾಲಯ ಸ್ಥಾಪನೆಗೆ ಹೋಬಳಿಯ ಗ್ರಾಮಗಳಾದ ಡಂಬಳ, ಹಿರೇವಡ್ಡಟ್ಟಿ, ಮೇವುಂಡಿ ಬರದೂರ ಸೇರಿದಂತೆ ವಿವಿಧ ಗ್ರಾಮಗಳ ವ್ಯಾಪ್ತಿಯಲ್ಲಿ ಅಗತ್ಯ ಜಮೀನು ಗುರುತಿಸಲಾಗಿದೆ. ಬಾಗಲಕೋಟಿ ತೋಟಗಾರಿಕಾ ವಿಶ್ವವಿದ್ಯಾಲಯ ಸಂಪೂರ್ಣ ತಂಡ ಇಲ್ಲಿಗೆ ಆಗಮಿಸಿ ಸರ್ಕಾರಕ್ಕೆ ಪೂರಕ ವರದಿ ಸಲ್ಲಿಸಿದೆ. ಸರ್ಕಾರ ಹಾಗೂ ಸಿಎಂ ಸಿದ್ಧರಾಮಯ್ಯ ಅವರು ಈ ಬಜೆಟ್‌ನಲ್ಲಿ ಘೋಷಣೆ ಮಾಡುವ ಆಶಾಭಾವನೆ ಇದೆ ಎಂದು ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಂಬಳ ಹೋಬಳಿಯ ಡಂಬಳ ಹಿರೇವಡ್ಡಟ್ಟಿ ಗ್ರಾಮದ ಭಾಗದಲ್ಲಿ ತೋಟಗಾರಿಕಾ ಮಹಾವಿದ್ಯಾಲಯ ಸ್ಥಾಪನೆಯಾಗುವ ಸ್ಥಳ ವೀಕ್ಷಣೆ ಮಾಡಿದ ನಂತರ ಗ್ರಾಮದ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ರಾತ್ರಿ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡುತ್ತಿದ್ದರು.

ಲಿಂ.ಡಾ. ತೋಂಟದ ಸಿದ್ದಲಿಂಗ ಮಹಾಸ್ವಾಮಿಗಳು ತೋಟಗಾರಿಕೆ ಬೆಳೆಗಳನ್ನು ತಾವೇ ಬೆಳೆದು ಈ ಭಾಗದ ರೈತರಿಗೆ ಪ್ರೇರಣೆಯಾಗಿದ್ದರು. ಈ ಭಾಗದಲ್ಲಿ ರೈತರು ಪೈರಲ್, ಡ್ಯಾಗನ್, ತೆಂಗು, ಅಡಕೆ, 650 ಹೇಕ್ಟರ್ ಬಾಳೆ ಬೆಳೆಯಲು ಪ್ರೋತ್ಸಾಹ ನೀಡಲಾಗಿದೆ. ಮಹಾವಿದ್ಯಾಲಯ ಸ್ಥಾಪನೆಯಾಗಬೇಕು ಎನ್ನುವದು ಸಹ ಶ್ರೀಗಳ ಕನಸಾಗಿತ್ತು. ಮಹಾವಿದ್ಯಾಲಯ ಸ್ಥಾಪನೆಯಾದರೆ ಗ್ರಾಮೀಣ ಭಾಗದ ರೈತರು ಆಧುನಿಕ ಕೃಷಿ ಪದ್ಧತಿ ಅಳವಡಿಸಿಕೊಳ್ಳಲು ಸಾಧ್ಯವಾಗುತ್ತದೆ, ಈ ಭಾಗದಲ್ಲಿ ಅಭಿವೃದ್ಧಿಯಾಗುತ್ತದೆ. ರೈತರು ಆರ್ಥಿಕ ಮುಖ್ಯ ಪ್ರವಾಹಿನಿಗೆ ಬರಲು ಸಾಧ್ಯವಾಗುತ್ತದೆ. ಯುವಕರಿಗೆ ಉದ್ಯೋಗ, ರೈತರು ಆಧುನಿಕ ಮಾದರಿಯ ತಾಂತ್ರಿಕತೆಯ ಮೂಲಕ ಬೆಳೆ ಬೆಳೆಯಲು ಸಾಧ್ಯವಾಗಲಿದೆ. ರೈತರು ಹಾಗೂ ಸಾರ್ವಜನಿಕರಿಗೆ ಮಹಾವಿದ್ಯಾಲಯದ ಪರಿಕಲ್ಪನೆ, ತಿಳುವಳಿಕೆ ಮೂಡಬೇಕಂದು ಸಲಹೆ ನೀಡಿದರು.



ಶಿಂಗಟಾಲೂರ ಏತ ನೀರಾವರಿ ಯೋಜನೆ ಈ ಭಾಗದ ಜನರಿಗೆ ಕಲ್ಪವೃಕ್ಷವಿದ್ದಂತೆ. ಡಂಬಳ, ಮುರಡಿ, ತಾಮ್ರಗುಂಡಿ, ಹಿರೇವಡ್ಡಟ್ಟಿ, ಜಂತ್ಲಿಶಿರೂರ, ಪೇಠಾ ಆಲೂರ ಗ್ರಾಮಗಳ ಕೆರೆಗಳಲ್ಲಿ ವರ್ಷಪೂರ್ತಿ ನೀರು ಲಭ್ಯವಿರುವದರಿಂದ ಮಹಾವಿದ್ಯಾಲಯಕ್ಕೆ ಸಹಕಾರಿಯಾಗಲಿದೆ. ಜಾಲವಾಡಗಿ ಏತನೀರಾವರಿ ಯೋಜನೆಗೆ 198 ಕೋಟಿ ರೂ ಮರು ಟೆಂಡರ್ ಕರೆಯಲಾಗಿದ್ದು, ಈ ಯೋಜನೆಯಿಂದ ಸಾಕಷ್ಟು ಗ್ರಾಮಗಳ ಕೆರೆಗಳು ಭರ್ತಿಯಾಗುವದರೊಂದಿಗೆ ಅನುಕೂಲವಾಗುತ್ತದೆ ಎಂದರು.

> ಕ್ಷೇತ್ರದ ಶಾಸಕನಾಗಿ ಈ ಭಾಗದ ಜನರ ಸಹಕಾರದಿಂದ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ಮುಂದಿನ ದಿನಗಳಲ್ಲಿಯೂ ಮಾಡುತ್ತೇನೆ. ಈ ಅವದಿಯಲ್ಲಿಯೇ ರೈತರ, ಶೈಕ್ಷಣಿಕ, ಕಾರ್ಮಿಕರ, ಯುವಕರ ಹಿತಕ್ಕಾಗಿ ಹಲವು ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಂಡಿದ್ದೇನೆ. ಅವುಗಳನ್ನು ನಮ್ಮ ಅವಧಿಯಲ್ಲಿಯೇ ಪೂರ್ಣಗೊಳಿಸುತ್ತೇನೆ ಎನ್ನುವ ಸಂಕಲ್ಪ ಹೊಂದಿದ್ದೇನೆ ಎಂದು ಶಾಸಕ ಜಿ.ಎಸ್. ಪಾಟೀಲ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಹಸೀಲ್ದಾರ ಪಿ.ಎಸ್. ಎರಿಸ್ವಾಮಿ, ಕಂದಾಯ ನಿರೀಕ್ಷಕ ಪ್ರಭು ಬಾಗಲಿ, ಹಿರಿಯ ಮುಖಂಡ ವಿ.ಆರ್. ಗುಡಿಸಾಗರ, ಮುಖಂಡರಾದ ಬಸವರಾಜ ನವಲಗುಂದ, ಈಶುಫ ಇಟಗಿ, ಗೋಣಿಬಸಪ್ಪ ಕೊರ್ಲಹಳ್ಳಿ, ಅಬ್ದುಲ್ ಕಲಿಕೇರಿ, ಬಸವರಡ್ಡಿ ಬಂಡಿಹಾಳ, ಸುರೇಶ ಗಡಗಿ, ಬಾಬುಸಾಬ್ ಮೂಲಿಮನಿ ಇದ್ದರು.

### ಜಿ.ಎಸ್. ಪಾಟೀಲ ಕಿಡ್ಸ್ ಶಾಲೆಯ ಪ್ರಥಮ ವಾರ್ಷಿಕೋತ್ಸವದಲ್ಲಿ ಶಾಸಕ ಜಿ.ಎಸ್. ಪಾಟೀಲ

# ಮಕ್ಕಳಿಗೆ ಉತ್ತಮ ಸಂಸ್ಕೃತಿ ಕಲಿಸಿ



**■ವಿಜಯಸಾಕ್ಷಿ ಸುದ್ದಿ, ರೋಣ**

ಮಕ್ಕಳನ್ನು ನಾವು ದೇವರಿಗೆ ಹೋಲಿಕೆ ಮಾಡುತ್ತೇವೆ. ಕಾರಣ, ಆ ಮುಗ್ಧ ಮನಸ್ಸುಗಳಲ್ಲಿ ಬೆಳಕು ಅಡಕವಾಗಿದೆ ಎಂಬ ದೃಷ್ಟಿಯಿಂದ. ಹೀಗಾಗಿ, ಮಕ್ಕಳ ಮನಸ್ಸುಗಳಲ್ಲಿ ಒಳ್ಳೆಯ ಭಾವನೆಗಳನ್ನು ಬಿತ್ತಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಅಕ್ಕಮಹಾದೇವಿ ಕಲ್ಯಾಣ ಮಂಟಪದಲ್ಲಿ ಜರುಗಿದ ಮಾತೋಶ್ರೀ ಬಸಮ್ಮಾ ಎಸ್. ಪಾಟೀಲ ಕಿಡ್ಸ್ ಶಾಲೆಯ ಪ್ರಥಮ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಗುವಾಗಿರುವಾಗಲೇ ಪಾಲಕರಾದ ನಾವು ಒಳ್ಳೆಯ ಸಂಸ್ಕೃತಿಯನ್ನು ಕಲಿಸುವ ಮೂಲಕ ಗುಣಮಟ್ಟದ ಅಕ್ಷರ ಜ್ಞಾನ ಒದಗಿಸುವಲ್ಲಿ ಮುಖ್ಯ ಪಾತ್ರವನ್ನು ವಹಿಸಬೇಕು. ಮಕ್ಕಳಿಗೆ ಸುಂದರ ಸಮಾಜದಲ್ಲಿ ಸಮ್ಮಿಳನಗೊಳ್ಳುವಂತೆ ಪ್ರೇರೆಪಿಸಿ ಅವರನ್ನು ಉತ್ತಮ ನಾಗರಿಕರನ್ನಾಗಿ ಬೆಳೆಸಬೇಕು ಎಂದರು. ಪಾಲಕರಿಗೆ ತೊಂದರೆಗಳಿರಬಹುದು. ಆದರೆ ಮಕ್ಕಳಿಗೆ ಅಕ್ಷರ ಜ್ಞಾನ ನೀಡುವಲ್ಲಿ ಹಿಂದಕ್ಕೆ ಸರಿಯಬಾರದು. ಮಕ್ಕಳಲ್ಲಿ ಸಮಾಜ ಮೆಚ್ಚುವ ಪ್ರತಿಭೆಗಳು ಅಡಕವಾಗಿರುತ್ತವೆ. ಅಂತಹ ಪ್ರತಿಭೆಯನ್ನು ಹೊರತೆಗೆಯುವ ಕಾರ್ಯವನ್ನು ಶಿಕ್ಷಕರ ಜೊತೆಗೆ ಪಾಲಕರೂ ಮಾಡಬೇಕು ಎಂದ ಅವರು, ಶೈಕ್ಷಣಿಕ ವರ್ಷದಿಂದ 1ರಿಂದ 5ನೇ ತರಗತಿಯವರೆಗೆ ಶಾಲೆಯನ್ನು ಆರಂಭಿಸಲಾಗುವುದು ಎಂದರು.

ಮಾತೋಶ್ರೀ ಅನ್ನಪೂರ್ಣ ಜಿ.ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಿದರು. ಅನನ್ಯಾ ಪಾಟೀಲರವರಿಂದ ಸಂಗೀತ ಕಾರ್ಯಕ್ರಮ ಹಾಗೂ ಶಾಲಾ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಡಾ. ಮಧು ರಡ್ಡೇರ, ವರ್ಷಾ ಪಾಟೀಲ, ಶಶಿಕಲಾ ಪಾಟೀಲ, ಅಕ್ಷತಾ ರಾಯಬಾಗಿ, ಸಂಗನಗೌಡ ಪಾಟೀಲ, ವಿ.ಆರ್. ಗುಡಿಸಾಗರ, ಪರಶುರಾಮ ಅಳಗವಾಡಿ, ವಿ.ಬಿ. ಸೋಮನಕಟ್ಟಿಮಠ, ಯೂಸುಫ್ ಇಟಗಿ, ಶಫೀಕ ಮೂಗನೂರ, ಡಾ. ಐ.ಬಿ. ಕೊಟ್ಟೂರಶೆಟ್ಟರ, ಡಾ. ವಾ.ಎನ್. ಪಾಪಣ್ಣವರ, ಸಿಪಿಐ ಎಸ್.ಎಸ್. ಬಿಳಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

### ನಗರದಲ್ಲಿ ಮಾರ್ಚ್ 4, 5ರಂದು ಸಂಗೀತ ಪರಂಪರಾ ಉತ್ಸವ

# ಪಂಚಾಕ್ಷರಿ ಗದಗ ಘರಾನಾ ಸಮ್ಮೇಳನ-ಸಮ್ಮಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಗಾನಯೋಗಿ ಪಂಚಾಕ್ಷರಿ ಸಂಗೀತ ಪರಂಪರಾ ಉತ್ಸವ, ಪಂಚಾಕ್ಷರಿ ಗದಗ ಘರಾನಾ ಸಮ್ಮೇಳನ, ಗುರುಕುಮಾರ ಪಂಚಾಕ್ಷರಿ ಸಮ್ಮಾನ-2025 ಕಾರ್ಯಕ್ರಮವು ಮಾರ್ಚ್ 4 ಹಾಗೂ 5ರಂದು ಅಡವೀಂದ್ರಸ್ವಾಮಿ ಮಠದ ಆಶ್ರಯದಲ್ಲಿ 333ನೇ ಶಿವಾನುಭವ, ಬೆಂಗಳೂರಿನ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಎರಡು ದಿನಗಳವರೆಗೆ ಜರುಗಲಿದೆ.

ಮಾ. 4ರಂದು ಸಂಜೆ 4 ಗಂಟೆಗೆ ರಾಷ್ಟ್ರೀಯ ಪಂಚಾಕ್ಷರ ಘರಾನಾ ಸಮ್ಮೇಳನದ ಉದ್ಘಾಟನಾ ಸಮಾರಂಭ ಜರುಗುವದು. ಗದುಗಿನ ಜ.ಶಿವಾನಂದ ಬ್ರಹನ್ಮಠದ ಪೂಜ್ಯ ಜ.ಸದಾಶಿವಾನಂದ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಹರ್ಲಾಪೂರದ ಕೊಟ್ಟೂರೇಶ್ವರ ಮಠದ ಪೂಜ್ಯ ಕೊಟ್ಟೂರೇಶ್ವರ ಮಹಾಸ್ವಾಮಿಗಳು ನೇತೃತ್ವ ವಹಿಸುವರು. ಸಮ್ಮುಖವನ್ನು ಅಡವೀಂದ್ರ ಮಠದ ಧರ್ಮದರ್ಶಿ ವೇ. ಮಹೇಶ್ವರಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರೂ ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿಯ ಅಧ್ಯಕ್ಷರೂ ಆದ ಪಂ. ಡಾ.ರಾಜಗುರು ಗುರುಸ್ವಾಮಿ ಕಲಿಕೇರಿ ವಹಿಸುವರು. ಉದ್ಘಾಟನೆಯನ್ನು ರಾಣಿ ಚೆನ್ನಮ್ಮ ಬ್ಯಾಂಕ್ ಅಧ್ಯಕ್ಷ ಡಾ. ಎಸ್.ಕೆ. ಮ್ಯಾಗೇರಿ ನೆರವೇರಿಸುವರು. ಡಾ. ಮಹಾಂತೇಶ ಸಜ್ಜನ ಉಪನ್ಯಾಸ ನೀಡುವರು. ಮುಖ್ಯ ಅತಿಥಿಗಳಾಗಿ ಶಿವಾನುಭವ ಸಮಿತಿಯ ಡಾ. ಎಸ್.ಕೆ. ನಾಲತ್ವಾಡಮಠ, ಸರಸ್ವತಿ ಸಜ್ಜನ ಆಗಮಿಸುವರು. ಪ್ರಸಾದ ಸೇವೆಯನ್ನು ಎಸ್.ಆರ್. ನಾಲತ್ವಾಡಮಠ, ಮೀನಾಕ್ಷಿ ಬೆನಕಣ್ಣವರ, ಶ್ರೀಶೈಲ್ ಗದಗಿನಮಠ, ರಾಚಪ್ಪ ಕಾಳಗಿ ವಹಿಸಿಕೊಳ್ಳುವರು. ಕಲಾವಿದರಾದ ಮಲ್ಲಿಕಾರ್ಜುನ ಭಜಂತ್ರಿ, ಶ್ಯಾಮರಾವ್ ಪುಲಾರಿ, ವೀರುಪಾಕ್ಷಯ್ಯ ಹೊಸಳ್ಳಿಮಠ, ಬಸವರಾಜ ಹೊನ್ನಿಗನೂರ, ಹುಚ್ಚಯ್ಯ ಹಿರೇಮಠ, ಸುಕ್ರುಸಾಬ ಮುಲ್ಲಾ, ವೀರಭದ್ರಪ್ಪ ಅಂಗಡಿ, ವಿಜಯಲಕ್ಷ್ಮೀ ಹಿರೇಮಠ ಅವರಿಂದ ಸಂಗೀತ ಕಾರ್ಯಕ್ರಮ ಜರಗುವುದು.



ಮಾ. 5ರಂದು ಸಂಜೆ 4 ಗಂಟೆಗೆ ಗುರುಕುಮಾರ ಪಂಚಾಕ್ಷರಿ ಸಮ್ಮಾನ ಸಮಾರಂಭ ಜರುಗಲಿದ್ದು, ಸಾನ್ನಿಧ್ಯವನ್ನು ಮುಂಡರಗಿಯ ನಾಡೋಜ ಜ. ಡಾ. ಅನ್ನದಾನೀಶ್ವರ ಮಹಾಸ್ವಾಮಿಗಳು ವಹಿಸುವರು. ನೇತೃತ್ವವನ್ನು ಹಾವೇರಿ ಹುಕ್ಕೇರಿಮಠದ ಪೂಜ್ಯ ಸದಾಶಿವ ಮಹಾಸ್ವಾಮಿಗಳು ವಹಿಸುವರು. ಸಮ್ಮುಖವನ್ನು ಅಡವೀಂದ್ರ ಮಠದ ಧರ್ಮದರ್ಶಿ ವೇ. ಮಹೇಶ್ವರಸ್ವಾಮಿಗಳು ವಹಿಸುವರು. ಅಧ್ಯಕ್ಷತೆಯನ್ನು ಪಂ.ಡಾ. ರಾಜಗುರು ಗುರುಸ್ವಾಮಿ ಕಲಿಕೇರಿ ವಹಿಸುವರು. ಬಾಗಲಕೋಟೆಯ ಸಂಗೀತ ಪ್ರಾಧ್ಯಾಪಕ ಡಾ.ಸಿದ್ಧರಾಮಯ್ಯ ಮಠಪತಿ ಅವರಿಂದ ಘರಾನಾ ನುಡಿ, ಮುಖ್ಯ ಅತಿಥಿಗಳಾಗಿ ಬಸವರಾಜ ಪಲ್ಲೇದ, ಲೀಲಾವತಿ ಬಿಳೇಯಲಿ, ನಾಗರಾಜ ಹೊಸೂರ ಆಗಮಿಸುವರು.

> ವೀರಶೈವ ಮಹಾಸಭಾದ ಜಿಲ್ಲಾ ಅಧ್ಯಕ್ಷ ಶರಣಬಸಪ್ಪ ಗುಡಿಮನಿ, ರಾಜ್ಯ ಪ್ರಶಸ್ತಿ ವಿಜೇತೆ ಡಾ. ವ್ಹಿ.ಬಿ. ಹಿರೇಮಠ ಅವರಿಗೆ ಸನ್ಮಾನವಿದೆ. ದಾಸೋಹ ಸೇವೆಯನ್ನು ಸಿದ್ಧಲಿಂಗೇಶ ಮೂರಶಿಳ್ಳಿನ ವಹಿಸಿಕೊಂಡಿದ್ದಾರೆ. ಅಂತಾರಾಷ್ಟ್ರೀಯ ಗಾಯಕರಾದ ಪದ್ಮಶ್ರೀ ಪಂ. ಎಂ. ವೆಂಕಟೇಶಕುಮಾರ ಅವರಿಂದ ಸಂಗೀತವಿದ್ದು ಶ್ರೀಧರ ಮಾಂಡ್ರೆ ತಬಲಾ ಸೋಲೋ ನೀಡುವರು.

ಡಾ. ಸಿದ್ಧರಾಮಯ್ಯ ಮಠಪತಿ, ಡಾ. ನಾರಾಯಣ ಹಿರೇಕೊಳಚಿ, ಡಾ. ಗುರುಬಸವ ಮಹಾಮನಿ, ಡಾ. ಹನುಮಂತ ಕೊಡಗಾನೂರ, ಡಾ. ಶಿವಬಸಯ್ಯ ಗಡ್ಡದಮಠ, ಪ್ರೊ. ಎಂ.ಎಸ್. ಮಠದ, ಸುಕ್ರುಸಾಬ ಮುಲ್ಲಾ, ರೇಷ್ಮಾ ಭಟ್, ಶರಣಕುಮಾರ ಗುತ್ತರಗಿ, ಬಸವರಾಜ ಹಿರೇಮಠ, ಕೃತಿಕಾ ಜಂಗಿನಮಠ, ಭೀಮಾಶಂಕರ ಬಿದನೂರ ಅವರಿಂದ ಸಂಗಿತವಿದ್ದು, ಶ್ರೀಗುರು ಪಂಚಾಕ್ಷರಿ ಸೇವಾ ಸಮಿತಿಯ ಕಾರ್ಯದರ್ಶಿ ಮಲ್ಲಯ್ಯ ಶಿರೋಳಮಠ ಸರ್ವರಿಗೂ ಸ್ವಾಗತ ಕೋರಿದ್ದಾರೆ.

## ಸಂಪಾದಕೀಯ

# ಖಾಸಗಿ ಜಾತಿ ಜನಗಣತಿ ಸಂಘರ್ಷಕ್ಕೆ ಕಾರಣ

ವೀರಶೈವ ಲಿಂಗಾಯತ ಸಮುದಾಯದ ಮುಖಂಡ ಹಾಗೂ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಖಾಸಗಿ ಸಂಸ್ಥೆಯಿಂದ ಜಾತಿ ಜನಗಣತಿ ಮಾಡುವ ಹೇಳಿಕೆ ಒಂದನ್ನು ನೀಡಿದ್ದಾರೆ.

ವೀರಶೈವ ಲಿಂಗಾಯತ ಸಮುದಾಯದ ಜನಸಂಖ್ಯೆ ಕಡಿಮೆ ಇರುವುದಕ್ಕೆ, ಸಮಾಜದ ಜನ ನೀಡಿರುವ ತಪ್ಪು ಮಾಹಿತಿಯೇ ಕಾರಣ ಎನ್ನುವ ಕಾರಣಕ್ಕಾಗಿ ಈಶ್ವರ್ ಖಂಡ್ರೆ ಇಂಥದೊಂದು ನಿರ್ಧಾರಕ್ಕೆ ಬಂದಿದ್ದಾರೆ.

ಸರ್ಕಾರ ಈಗಾಗಲೇ ಒಮ್ಮೆ ಜಾತಿ ಜನಗಣತಿಯನ್ನ ನಡೆಸಿದೆ. ಆ ಜಾತಿ ಜನಗಣತಿ ಬಿಡುಗಡೆಗೆ ಅನೇಕ ಅಪಸ್ವರಗಳು ಬಂದ ಕಾರಣಕ್ಕೆ ಸದ್ಯ ಅದು ಇನ್ನೂ ಬಹಿರಂಗಗೊಂಡಿಲ್ಲ. ಆದರೆ ಆ ವರದಿಯ ಸೋರಿಕೆಯಾದ ಅಂಶಗಳನ್ನೇ ಆಧರಿಸಿ ಇವತ್ತು ಈಶ್ವರ್ ಖಂಡ್ರೆ, ಖಾಸಗಿ ಜಾತಿ ಜನಗಣತಿಗೆ ಮುಂದಾಗಿದ್ದಾರೆ.

ಈಶ್ವರ್ ಖಂಡ್ರೆ ಹೇಳಿದಂತೆ ಖಾಸಗಿಯಾಗಿ ಜಾತಿ ಜನಗಣತಿ ನಡೆಸಿ ವರದಿ ಸಲ್ಲಿಕೆ ಪಡೆದುಕೊಂಡ ನಂತರ, ಸರ್ಕಾರವು ಮತ್ತೊಮ್ಮೆ ಜಾತಿ ಜನಗಣತಿಯನ್ನು ನಡೆಸಿ ವರದಿ ನೀಡಿದ ನಂತರ, ಆ ಎರಡು ವರದಿಗಳಲ್ಲಿ ವ್ಯತ್ಯಾಸ ಕಂಡು ಬಂದರೆ ಅದು ಮತ್ತೊಂದು ಸಂಘರ್ಷಕ್ಕೆ ಕಾರಣವಾಗಲಿದೆ.

ಸೋರಿಕೆಯಾದ ಅಂಶಗಳನ್ನೇ ಆಧರಿಸಿ ಖಂಡ್ರೆ ಈ ರೀತಿಯ ಖಾಸಗಿ ಜಾತಿ ಜನಗಣತಿಗೆ ಮುಂದಾದರೆ, ಇನ್ನುಳಿದ ಅನೇಕ ಸಮುದಾಯಗಳು ಇದೇ ಹಾದಿ ತುಳಿಯುವ ಸಾಧ್ಯತೆಗಳಿವೆ. ಈ ರೀತಿ ಬೆಳವಣಿಗೆಗಳು ಸಮಾಜದಲ್ಲಿ ಉಂಟಾದರೆ, ಅನೇಕ ರೀತಿಯ ಸಂಘರ್ಷಗಳಿಗೆ ಕಾರಣವಾಗಲಿದೆ.

ಜನಗಣತಿಯೇ ಆಗಲಿ ಜಾತಿ ಜನಗಣತಿಯೇ ಆಗಲಿ, ಅದನ್ನ ಸರ್ಕಾರವೇ ಮಾಡಬೇಕು. ಅಂದಾಗ ಜನಸಂಖ್ಯೆ ಆಧರಿಸಿ ಸೌಲಭ್ಯಗಳು ಸಿಗಲು ಸಾಧ್ಯ.

### ಮಾರ್ಚ್ 2ರಂದು 'ರಮಜಾನ್' ಪ್ರಾರಂಭದ ನಿಮಿತ್ತ ವಿಶೇಷ ಲೇಖನ

# 'ರಮಜಾನ್' ಒಂದು ಆರಾಧನೆ



ಮಾನವ ಕುಲದ ಮೇಲೆ ಅಲ್ಲಾಹನ ಕೊಡುಗೆ ಅಪಾರವಾಗಿದೆ. ಅಲ್ಲಾಹನ ಈ ಮಹಾನ್ ಕೊಡುಗೆಗೆ ಪ್ರತಿಯಾಗಿ ಮಾನವನು ಉಪವಾಸ ವ್ರತಾಚರಿಸುವ ಮೂಲಕ ಸಂತೋಷ, ಕೃತಜ್ಞತೆಯನ್ನು ಅರ್ಪಿಸುತ್ತಾನೆ. ನಾವು ಅವನ ದಾಸರು ಮತ್ತು ಆರಾಧಕರಾಗಿದ್ದೇವೆ. ರಮಜಾನ ತಿಂಗಳು ಉಪವಾಸ ವೃತವು ಒಂದು ಪವಿತ್ರವಾದ ಆರಾಧನೆಯಾಗಿರುವಂತೆಯೇ ನಮ್ಮ ಆಧ್ಯಾತ್ಮಿಕ ಮತ್ತು ನೈತಿಕ ತರಬೇತಿಯ ಅತ್ಯುತ್ತಮ ದಾರಿಯೂ ಆಗಿದೆ.

ಉಪವಾಸ ವ್ರತದ ಮೂಲ ಉದ್ದೇಶ ಆತ್ಮದ ಪರಿಶುದ್ಧತೆ. ಎಲ್ಲಿಯವರೆಗೆ ವ್ಯಕ್ತಿಯು ಆತ್ಮ ನಿಯಂತ್ರಣವನ್ನು ಹೊಂದುವುದಿಲ್ಲವೋ ಅಲ್ಲಿಯವರೆಗೆ ಅವನಲ್ಲಿ ಧರ್ಮನಿಷ್ಠೆಯು ಬೆಳೆಯಲಾರದು. ಚಿತ್ತಾಕಾಂಕ್ಷೆಗಳ ಪ್ರವಾಹದಲ್ಲಿರುವ ವ್ಯಕ್ತಿಗೆ ಅಲಾಹನ ಮಹಾನತೆಯ ಪರಿವೆಯೂ ಇರುವುದಿಲ್ಲ ಮತ್ತು ಜೀವನದ ಉನ್ನತ ವಾಸ್ತವಿಕತೆ ಬೆಳೆಯುವುದಿಲ್ಲ. ತನ್ನ ಸೃಷ್ಟಿಯ ವಾಸ್ತವಿಕ ಬೇಡಿಕೆಗಳ ಕಡೆಗೆ ಗಮನ ಹರಿಸುವುದರಿಂದ ಅವನನ್ನು ತಡೆಯುತ್ತದೆ. ಉಣ್ಣುವ, ಕುಡಿಯುವ ಮತ್ತು ಲೈಂಗಿಕ ಆಸೆಗಳ ಈಡೇರಿಕೆಗಳ ಹೊರತು ಇನ್ನೂ ಕೆಲವು ವಿಷಯಗಳು ನಮ್ಮ ಗಮನವನ್ನು ಬಯಸುತ್ತವೆ ಎಂಬುದನ್ನು ಉಪವಾಸ ವೃತವು ಪ್ರಾಯೋಗಿಕವಾಗಿ ತೋರಿಸಿಕೊಡುತ್ತದೆ. ಉಪವಾಸ ವೃತವು ದಾಸನನ್ನು ಅಲ್ಲಾಹನೆಡೆಗೆ ಮತ್ತು ಜೀವನದ ಉನ್ನತ ವಾಸ್ತವಿಕತೆಗಳ ಕಡೆಗೆ ಹಮನಹರಿಸುವಂತೆ ಮಾಡುತ್ತದೆ. ಅಲ್ಲಿಂದ ಅವನು ತನ್ನ ಪ್ರಭುವಿಗೆ ತೀರಾ ನಿಕಟನಾಗುತ್ತಾನೆ, ಅಲ್ಲಿ ಅಂಧಕಾರವು ಕರಗಿಹೋಗುತ್ತದೆ ಮತ್ತು ಆಧ್ಯಾತ್ಮಿಕವಾದ ಪರದೆಗಳೆಲ್ಲವೂ ಸರಿದು ಹೋಗುತ್ತವೆ.

ರಮಜಾನ ತಿಂಗಳ ಉಪವಾಸ ವೃತವು ಮೇಲ್ನೋಟಕ್ಕೆ ಆಹಾರ, ಪಾನಿಯ ಸೇವನೆ ಮತ್ತು ಇತರೆ ಸೇವನೆಯಿಂದ ತಡೆದಿರಿಸಿಕೊಳ್ಳುವುದರ ಹೆಸರಾಗಿದೆ. ಆದರೆ ಆಂತರಿಕವಾಗಿ ಉಪವಾಸವು ವ್ಯಕ್ತಿಗೆ ಅಕಾಂಕ್ಷೆಗಳ ನಿಯಂತ್ರಣ ಮತ್ತು ಧರ್ಮ ನಿಷ್ಠೆಯ ಜೀವನ ಲಭಿಸುವುದರ ಹೆಸರಾಗಿದೆ. ಕೆಲವೊಮ್ಮೆ ವ್ಯಕ್ತಿಯು ಮೇಲ್ನೋಟಕ್ಕೆ ಉಪವಾಸಿಗನಾಗಿ ಕಾಣುತ್ತಾನೆ. ಆದರೆ ವಾಸ್ತವದಲ್ಲಿ ಅವನ ಉಪವಾಸವು ವ್ರತವಾಗಿರುವುದಿಲ್ಲ. ಉಪವಾಸ ವೃತ ಎಂಬುದು, ತನ್ನನ್ನು ತಾನು ಅಲ್ಲಾಹನಿಗಾಗಿ ಸಕಲ ವಸ್ತು ವಿಷಯಗಳಿಂದ ಮುಕ್ತನಾಗುವ ಮತ್ತು ಪರಿಪೂರ್ಣವಾಗಿ ಅಲ್ಲಾಹನ ಕಡೆಗೆ ಗಮನ ಕೇಂದ್ರಿತನಾಗುವುದರ ಹೆಸರಾಗಿದೆ.

ನಾವು ರಮಜಾನ ತಿಂಗಳ ಉಪವಾಸ ವ್ರತದ ಸ್ಥಿತಿಯಲ್ಲಿ ಬಹುತೇಕವಾಗಿ ದೇವಚರರ ಗುಣ ಅವರು ಅನುಸರಿಸುವ ಮಾರ್ಗಗಳು ಲಭಿಸುತ್ತವೆ. ದೇವಚರರು ಆಹಾರ ಪಾನೀಯ ಸೇವನೆಯಿಂದ ನಿರಪೇಕ್ಷರಾಗಿದ್ದಾರೆ. ಅಲ್ಲಾಹನ ಸ್ತುತಿ ಮತ್ತು ಆರಾಧನೆಗಳೇ ಅವರಿಗೆ ಆಹಾರ. ಉಪವಾಸ ವ್ರತಾಚರಣೆಯ ಸ್ಥಿತಿಯಲ್ಲಿ ವಿಶ್ವಾಸಿ ದಾಸನು ತನ್ನ ಚಿತ್ತಾಕಾಂಕ್ಷೆ ಮತ್ತು ಆಹಾರ ಪಾನೀಯ, ದುಶ್ಚಟಗಳಿಂದ ದೂರವುಳಿದು, ದೇವನ ದಾಸ್ಯರಾಧನೆಯಲ್ಲಿ ತನ್ನ ತನು ಮನವನ್ನು ತಲ್ಲೀನನಾಗಿರುತ್ತಾನೆ.

ಪ್ರವಾದಿಯವರ್ಯರು(ಸ) ಉಪವಾಸದ ತಿಂಗಳಲ್ಲಿ 'ಸಹನೆಯ ತಿಂಗಳು' ಎಂದು ಹೇಳಿರುವುದು ಉಪವಾಸ ವ್ರತವು ಒಂದು ಅತ್ಯಂತ ಪರಿಶುದ್ಧ ಆರಾಧನೆಯಾಗಿದೆ. ಉಪವಾಸ ವ್ರತವು ಅಲ್ಲಾಹನ ಮಹಾನತೆ ಮತ್ತು ಶ್ರೇಷ್ಟತೆಯ ಸನ್ಮಾರ್ಗ ದರ್ಶನ ಮತ್ತು ಕೃತಜ್ಞತಾರ್ಪಣೆಯ ದಾರಿಯಾಗಿದೆ. ರಮಜಾನಿನಲ್ಲಿ ಎಲ್ಲರೂ ಒಟ್ಟಿಗೆ ಉಪವಾಸ ವ್ರತಾಚರಿಸುವುದರಿಂದ ಮನಸ್ಸಿನ ಶಾಂತಿ ಧರ್ಮಶೀಲತೆ ಆಧ್ಯಾತ್ಮಿಕತೆ ಬೆಳೆಯುತ್ತದೆ.

ಈ ರಮಜಾನ್ ಉಪವಾಸ ವ್ರತದ ಉದ್ದೇಶ ಕೇವಲ ಉಪವಾಸದ ಕಾಲಕ್ಕೆ ಸೀಮಿತವಲ್ಲ. ಬದಲಾಗಿ ಅದು ಮಾನವನ ಇಡೀ ಜೀವನಕ್ಕೆ ಸೀಮಿತವಾಗಿದೆ. ನಿಮ್ಮನ್ನು ಸೃಷ್ಟಿಸಿದ ನಿಮ್ಮ ಪ್ರಭುವಿನ ನಾಮದೊಂದಿಗೆ. ಅವನು, ಹೆಪ್ಪುಗಟ್ಟಿದ ರಕ್ತದ ಒಂದು ಪಿಂಡದಿಂದ ಮಾನವನನ್ನು ಸೃಷ್ಟಿಸಿದನು, ಅವನು ಲೇಖನಿಯ ಮೂಲಕ ವಿದ್ಯೆ ಕಲಿಸಿದನು, ಮಾನವನು ತಿಳಿದಿರದಂತಹ ಜ್ಞಾನವನ್ನು ಅವನಿಗೆ ದಯಪಾಲಿಸಿದನು (ಪವಿತ್ರ ಕುರ್‌ಆನ್:96:1:5).ಇದುವೇ ಪ್ರಪ್ರಥಮವಾಗಿ ಅವತೀರ್ಣಗೊಂಡ ಪವಿತ್ರ ಕುರ್‌ಆನಿನ ಸೂಕ್ತಗಳು, ಅದು ಪವಿತ್ರ ರಮಜಾನ್ ತಿಂಗಳ 18ನೇ ಶುಕ್ರವಾರ ರಾತ್ರಿ (ಕ್ರಿ.ಶ. 610 ಆಗಸ್ಟ್ 17ನೆಯ) ದಂದು 'ಅಲ್ ಅಲಕ್' ಎಂಬ ಅಧ್ಯಾಯದ ಮೊದಲ ಐದು ವಚನಗಳು. ಉಪವಾಸ ವ್ರತವು ಅಲ್ಲಾಹನ ಮಹಾನತೆ ಮತ್ತು ಶ್ರೇಷ್ಟತೆಯ ಪ್ರಕಟಣೆಯಾಗಿದೆ ರಮಜಾನ ತಿಂಗಳಲ್ಲಿ ಒಂದೆಡೆ ಮಾನವನ ದಾಸ್ಯತನ ಮತ್ತು ವಿನೀತತೆಯು ಪ್ರಕಟವಾಗಿದೆ. ಇನ್ನೊಂದೆಡೆ ಅಲ್ಲಾಹನ ಪ್ರಭುತ್ವ ಮತ್ತು ಮಹಾನತೆಯ ಪ್ರಕಟವಾಗಿದೆ. ಉಪವಾಸ ವ್ರತವು ನಮಗೆಲ್ಲರಿಗೂ ಒಂದು ಪವಿತ್ರ ಆರಾಧನೆಯಾಗಿದೆ. ನಮ್ಮ ಸಂತೋಷವನ್ನು ವಿಶೇಷವಾದ ರಕ್ಬೀರ ಮತ್ತು ನಮಾಝಿನ ಮೂಲಕ ಪ್ರಕಟ ಪಡಿಸುತ್ತೇವೆ. ಅಲ್ಲಾಹನ ಸನ್ನಿಧಿಯಲ್ಲಿ ದಾಸನ ಕೃತಜ್ಞತಾರ್ಪಣೆಯೂ ಆಗಿದೆ. ಉಪವಾಸ ವ್ರತವು ಸಂಪೂರ್ಣವಾಗಿ ವಿನಯಶೀಲತೆಯ ಗುಣವಾಗಿದೆ. ಪಾಪ'ಗ'ಳಿಗೆ ಪ್ರಾಯಃಶ್ಚಿತದಲ್ಲಿ ಉಪವಾಸ ವ್ರತಕ್ಕೆ ಮಹತ್ತರವಾದ ಪಾತ್ರವಿರುವುದಕ್ಕೆ ಇದುವೆ ಕಾರಣವಾಗಿದೆ.



–ಡಾ. ತಯಬಅಲಿ ಅ.ಹೊಂಬಳ. ಗದಗ.

# ಪೌರಕಾರ್ಮಿಕರಿಗೆ ನೇಮಕಾತಿ ಪತ್ರ ಕೊಡಿ : ಎಂ. ವೆಂಕಟೇಶನ್

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಷ್ಟ್ರೀಯ ಸಫಾಯಿ ಕರ್ಮಚಾರಿಗಳ ಆಯೋಗದ ಅಧ್ಯಕ್ಷರಾದ ಎಂ.ವೆಂಕಟೇಶನ್ ಅವರು ಶುಕ್ರವಾರ ಬೆಳಿಗ್ಗೆ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಸಫಾಯಿ ಕರ್ಮಚಾರಿಗಳ ಕಲ್ಯಾಣ ಕಾರ್ಯಕ್ರಮಗಳ ಕುರಿತು ಪ್ರಗತಿ ಪರಿಶೀಲನಾ ಸಭೆ ಜರುಗಿಸಿದರು.




ಸಭೆಯಲ್ಲಿ ಪೌರಕಾರ್ಮಿಕರ ನೇಮಕಾತಿ, ಬಡ್ತಿ, ವೇತನ ಪಾವತಿ, ಸಂಕಷ್ಟ ಭತ್ಯೆ ಮತ್ತು ಇಎಸ್‌ಐ, ಪಿಎಫ್ ಜಮೆ ಕುರಿತು ನೇರವಾಗಿ ಪೌರಕಾರ್ಮಿಕರಿಂದ ಹಾಗೂ ಅಧಿಕಾರಿಗಳಿಂದ ಪಡೆದುಕೊಂಡರು. ಮಹಾನಗರ ಪಾಲಿಕೆಯಲ್ಲಿ ಪೌರ ಕಾರ್ಮಿಕರ ನೇಮಕಾತಿ ಪತ್ರಗಳನ್ನು ಆದಷ್ಟು ಬೇಗ ನೀಡುವಂತೆ ಸೂಚಿಸಿದರು.

ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ, ಅಳ್ನಾವರ ಮತ್ತು ಕಲಘಟಗಿ ಪಟ್ಟಣ ಪಂಚಾಯತಿಗಳಲ್ಲಿ ಹಾಗೂ ಕುಂದಗೋಳ, ಅಣ್ಣಿಗೇರಿ ಮತ್ತು ನವಲಗುಂದ ಪುರಸಭೆಗಳಲ್ಲಿ ಕೆಲಸ ಮಾಡುತ್ತಿರುವ ಪೌರಕಾರ್ಮಿಕರನ್ನು ಪ್ರತ್ಯೇಕವಾಗಿ ಮಾತನಾಡಿಸಿ, ಕುಂದುಕೊರತೆಗಳನ್ನು ವಿಚಾರಿಸಿದರು.

ನಗರ ಸ್ಥಳೀಯ ಸಂಸ್ಥೆಗಳು ಪೌರಕಾರ್ಮಿಕರ ಎಲ್ಲ ಬೇಡಿಕೆಗಳನ್ನು ಪರಿಶೀಲಿಸಿ ಪೂರೈಸಬೇಕು. ಕೆಲಸದಲ್ಲಿ ಉತ್ತಮ ಉಪಹಾರ, ಸುರಕ್ಷಾ ಸಾಧನಗಳನ್ನು ನೀಡಬೇಕು ಮತ್ತು ಕಾಲಕಾಲ ಆರೋಗ್ಯ ತಪಾಸಣೆ ಮಾಡಬೇಕೆಂದು ಸೂಚಿಸಿದರು.

ಮಹಾನಗರ ಪಾಲಿಕೆ ಆಯುಕ್ತ ರುದ್ರೇಶ ಗಾಳಿ ಸಭೆ ನಿರ್ವಹಿಸಿದರು. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಮಹಾಪೌರ ರಾಮಪ್ಪ ಕೃಷ್ಣಪ್ಪ ಬಡಿಗೇರ, ಉಪ ಮಹಾಪೌರ ಬಿಜವಾಡ ದುರ್ಗಮ್ಮಾ ಶಶಿಕಾಂತ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ಅಧೀಕ್ಷಕ ಗೋಪಾಲ ಬ್ಯಾಕೋಡ್, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಪಾಲಿಕೆ ವಿರೋಧ ಪಕ್ಷದ ನಾಯಕ ರಾಜು ಕಮತಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕಿ ಪಿ.ಶುಭ ಅವರು ವೇದಿಕೆಯಲ್ಲಿದ್ದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು, ಪೌರಕಾರ್ಮಿಕರು, ಜಿಲ್ಲಾ ಸಫಾಯಿ ಕರ್ಮಚಾರಿಗಳ ಸಮಿತಿ ಸದಸ್ಯರು, ಪೌರಕಾರ್ಮಿಕ ಸಂಘಟನೆಗಳ ಪ್ರತಿನಿಧಿಗಳು, ಸಮಾಜ ಕಲ್ಯಾಣ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

# ವಿದ್ಯಾರ್ಥಿ ನಿಲಯಕ್ಕೆ ಕಾಂಪೌಂಡ್ ನಿರ್ಮಿಸಲು ಆಗ್ರಹ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದಲ್ಲಿಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಕಾಂಪೌಂಡ್ ನಿರ್ಮಾಣ ಹಾಗೂ ವಸತಿ ನಿಲಯಕ್ಕೆ ಬೇಕಾದ ಪೀಠೋಪಕರಣ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಬೇಕೆಂದು ಆಗ್ರಹಿಸಿ ಶನಿವಾರ ಶಿರಹಟ್ಟಿಯಲ್ಲಿ ಕರ್ನಾಟಕ ಪ್ರಜಾಪರ ವೇದಿಕೆ ವತಿಯಿಂದ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ ಅವರಿಗೆ ಮನವಿ ಸಲ್ಲಿಸಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ವೇದಿಕೆಯ ತಾಲೂಕಾಧ್ಯಕ್ಷ ಹಸನ್ ತಹಸೀಲ್ದಾರ, ಗ್ರಾಮೀಣ ಘಟಕದ ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿನಿಯರಿಗೆ ಅನುಕೂಲವಾಗುವಂತೆ ಪಟ್ಟಣದ ಶ್ರೀ ಜ.ಫಕೀರೇಶ್ವರ ಸರಕಾರಿ ಪ್ರಥಮದರ್ಜೆ ಕಾಲೇಜಿನ ಹಿಂದುಗಡೆ ವಸತಿ ನಿಲಯವನ್ನು ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ 99 ಲಕ್ಷ ರೂ ವೆಚ್ಚದಲ್ಲಿ ನಿರ್ಮಾಣ ಮಾಡಿದ್ದು, ಕಟ್ಟಡಕ್ಕೆ ಸೂಕ್ತ ಕಾಂಪೌಂಡ್ ಇಲ್ಲದೆ ಕಟ್ಟಡ ಬಳಕಗೆ ಬಾರದೆ ನಿರುಪಯುಕ್ತವಾಗಿದೆ. ಆದ್ದರಿಂದ ಸಚಿವರು ಈ ಬಗ್ಗೆ ವಿಶೇಷ ಗಮನಹರಿಸಬೇಕೆಂದು ವಿನಂತಿಸಿದರು.

ಈ ಸಂದರ್ಭದಲ್ಲಿ ಶರೀಫ ಗುಡಿಮನಿ, ಸತೀಶ ನರಗುಂದ, ಬಸವರಾಜ ಅಕ್ಕಿ, ಕಳಕಪ್ಪ ಬಿಸನಳ್ಳಿ, ಸುನೀಲಗೌಡ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಕವನ

## ಡಾ. ಪಂ. ಪುಟ್ಟರಾಜಶ್ರೀ ಕವಿ ಗವಾಯಿಗಳವರು



ಪ ದ್ಮ ಭೂಷಣ ಪವಿತ್ರ ಪ್ರಶಸ್ತಿಗೆ ಭಾಜನರಾಗಿ, ಪ
ದ್ಮ ಕಮಲ ಗುರು ಕುಮಾರೇಶನ ಮಾನಸ ಪುತ್ರರಾಗಿ
ಭೂ ಮಂಡಲ ಕಂಡ ಅಪರೂಪದ ನಡೆದಾಡುವ ದೇವಋಷಿಯಾಗಿ
ಷ ಟಸ್ಥಲ, ಪಂಚಾಚಾರ, ಅಷ್ಟಾವರಣಗಳ ತ್ರಿವೇಣಿ ಸಂಗಮವಾಗಿ, ಕ
ಣ ಕಣದ ಕನ್ನಡದ ಮಣ್ಣಿನಲ್ಲಿ-ಮನಗಳಲ್ಲಿ ಪುಟ್ಟರಾಜ ನೆಲೆಯಾಗಿ

ಡಾ ಕ್ಟರೇಟ್ ಪದವಿಗೆ ಮಾನ್ಯರಾಗಿ, ಪಂಚಾಕ್ಷರ ಗವಾಯಿಗಳ ಶಿಷ್ಯರಾಗಿ
ಪಂ ಡಿತ ಬಿರುದು ಪಡೆದು ಶ್ರೇಷ್ಠರಾಗಿ, ವೀರೇಶ್ವರ ಪುಣ್ಯಾಶ್ರಮಕ್ಕೆ ಕಳಸವಾಗಿ

ಪು ಣ್ಯವಂತ ದಂಪತಿಗಳ ಕರುಳಿನ ಕುಡಿಯಾಗಿ, ಪು
ಟ್ಟ ರಾಜ ಹೆಸರನ್ನು ನಭೋಮಂಡಲದಲ್ಲಿ ಮೂಡಿಸಿದ ಯೋಗಿಯಾಗಿ,
ರಾ ಜ ಮರ್ಯಾದೆ ಪಡೆದ ಸಂಗೀತ ಸರಸ್ವತಿಯ ಋಷಿಯಾಗಿ
ಜ ನ್ಮ ಭೂಮಿಗೆ ಹೆಸರು, ಕೀರ್ತಿ ನೀಡಿದ ಸುಜ್ಞಾನಿಯಾಗಿ
ಶ್ರೀ ಸಾಮಾನ್ಯರ ಬದುಕಿಗೆ ಆಧಾರ ಸ್ತಂಭವಾಗಿ

ಕ ನಕ ಪುರಂದರ ಪ್ರತಿಷ್ಠಿತ ಪ್ರಶಸ್ತಿಗೆ ಪುರಸ್ಕೃತರಾಗಿ
ವಿ ಶ್ವವಿಖ್ಯಾತಿಯ ತುಲಾಭಾರ ಸೇವೆಗಳ ಚಕ್ರವರ್ತಿಯಾಗಿ

ಗ ವಾಯಿ ಎಂಬ ಬಿರುದಿಗೆ ಸಾರ್ಥಕರಾಗಿ
ವಾ ದ್ಯಗಳ ನುಡಿಸುವ ಗಾರುಡಿಗರಾಗಿ
ಯಿ ಒದುಮತಿಯ ಕನ್ನಡ ಕುವರರಾಗಿ
ಗ ದುಗನ್ನು ಗದ್ದುಗೆ ಮಾಡಿ ಭಿಕ್ಷಾ ಜೋ
ಳ ಗಿಯನ್ನು ಹೊತ್ತು ಅಂಧ-ಅನಾಥ ಮಕ್ಕಳಿಗೆ ತಂದೆಯಾಗಿ
ವ ಚನ ಸಿರಿಯ ದಾಸೋಹದ ಕಾಯಕ ಯೋಗಿಯಾಗಿ
ರು ದ್ರವೀಣೆಯ ಸಂಗೀತದ ಸುಪುತ್ರರಾಗಿ ಮೆರೆದ ಯೋಗಿ ಶಿವಯೋಗಿ.

– ಬಸವರಾಜ. ಮ.ಕುಕನೂರ. ನಾರಾಯಣಪೂರ, ಗದಗ.

## ನಿಧನ ವಾರ್ತೆ



**ಸೋಮಪ್ಪ ಬಾಲಪ್ಪ ಜೋಗಿನ**

ಗದಗ: ತಾಲೂಕಿನ ತಿಮ್ಮಾಪೂರ ಗ್ರಾಮದ ನಿವಾಸಿ, ರೈಲ್ವೆ ಇಲಾಖೆಯ ನಿವೃತ್ತ ನೌಕರ ಸೋಮಪ್ಪ ಬಾಲಪ್ಪ ಜೋಗಿನ ಇವರು ತಮ್ಮ 68ನೇ ವಯಸ್ಸಿನಲ್ಲಿ ನಿಧನರಾದರು.

ಮೃತರು ಪತ್ನಿ, ನಾಲ್ಕು ಜನ ಗಂಡುಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ.

### ಕೆಜಿಎಂಎಸ್ ಶಾಲೆಯಲ್ಲಿ ವ್ಯಾಪಾರ ಚತುರತೆ ತೋರಿದ ಮಕ್ಕಳು

# ಗಮನ ಸೆಳೆದ ಮಕ್ಕಳ ಸಂತೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಯವ್ವಾ ಬರ್‍ರಿ, ಯಪ್ಪಾ ಬರ್‍ರಿ, ಅಕ್ಕಾರ ಬರ್‍ರಿ, ಟೀಚರ ಬರ್‍ರಿ, ಸರ ಬರ್‍ರಿ ಎಲ್ಲಾನೂ ಕಡಿಮಿ ರೊಕ್ಕದಾಗ ಸಿಗ್ತಾವ್ರಿ. ಹೊರಗ ಪ್ಯಾಟ್ಯಾಗ ಹೆಚ್ಗಿ ದುಡ್ಡು ಕೊಟ್ಟು ತೊಗೊಳ್ಳೋದಕ್ಕಿಂತ ಇಲ್ಲೇ ತಗೋರಿ ಎಂದು ಮಕ್ಕಳು ರಾಗವಾಗಿ ಕರೆಯುತ್ತಿದ್ದರೆ ಎಂಥವರಿಗಾರದೂ ಒಂದು ಕ್ಷಣ ಇಲ್ಲಿ ನಿಂತು ವ್ಯಾಪಾರ ಮಾಡಿ ಹೋಗಬೇಕು ಎನ್ನುವ ಮನಸ್ಸಾಗುತ್ತಿತ್ತು. ಶನಿವಾರ ಇಲ್ಲಿನ ಕೆಜಿಎಂಎಸ್ ಶಾಲೆಯಲ್ಲಿ ಮಕ್ಕಳು ಸಂತೆಯನ್ನು ಹಚ್ಚಿ ವ್ಯಾಪಾರ ಮಾಡುತ್ತಿದ್ದ ದೃಶ್ಯ ನಯನ ಮನೋಹರವಾಗಿತ್ತು.

ಮಕ್ಕಳಿಗೆ ವ್ಯಾಪಾರ-ವಹಿವಾಟಿನ ಪ್ರತ್ಯಕ್ಷ ಅನುಭವ ನೀಡುವದರ ಜೊತೆಗೆ ಲಾಭ-ನಷ್ಟಗಳ ಪರಿಚಯವನ್ನು ಮಾಡಿಸಬೇಕೆನ್ನುವ ಶಿಕ್ಷಕರ ಪ್ರಾಯೋಗಿಕ ಚಟುವಟಿಕೆಯ ಸ್ವರೂಪವೇ ಈ ಮಕ್ಕಳ ಸಂತೆಯಾಗಿತ್ತು. ಹೂವು ಹೊರಗ ತಗೊಂಡ್ರ 20ರೂ.ಕ್ಕ ಮಳಾರಿ. ಆದ್ರ ಇಲ್ಲೆ ಬರೀ 15 ರೂಪಾಯಿಕ್ಕ ಮೊಳ ಕೊಡಾಕ ಹತ್ತೇನಿ ಬರ್‍ರಿ ಎಂದು ಕರೆಯುವ ಹೂವಾಡಗಿತ್ತಿಯ ಮಾತು ಎಲ್ಲರನ್ನೂ ಸೆಳೆಯುತ್ತಿತ್ತು.



ಬೆಂಡೆ, ಬದನೆ, ಚೌಳಿಕಾಯಿ, ಕರಿಬೇವು, ಕೋತಂಬರಿ, ಸೊಪ್ಪಿನ ಪಲ್ಯೆ, ಪಾನಿಪುರಿ ಹೀಗೆ ಸಂತೆಯಲ್ಲಿ ಏನೆಲ್ಲ ಸಿಗುತ್ತವೋ ಅವೆಲ್ಲವೂ ಈ ಮಕ್ಕಳ ಸಂತೆಯಲ್ಲಿದ್ದವು. ಬಂದಿದ್ದ ಪಾಲಕರೂ ಸಹ ನಿಜ ಸಂತೆಯಲ್ಲಿ ಹೇಗೆ ಚೌಕಾಸಿ ಮಾಡಿ ತೆಗೆದುಕೊಳ್ಳುತ್ತಾರೆಯೋ ಹಾಗೆಯೇ ಇಲ್ಲಿಯೂ ಸಹ ನಡೆದಿದ್ದ ಚೌಕಾಸಿ ಎಲ್ಲರ ಗಮನ ಸೆಳೆಯಿತು. ಚೌಕಾಸಿ ಮಾಡುವಾಗ ವಿದ್ಯಾರ್ಥಿಗಳು ತೋರಿದ ಬುದ್ಧಿಮತ್ತೆಯನ್ನು ಮೆಚ್ಚಲೇಬೇಕು. ನಿಜಕ್ಕೂ ನಮ್ಮ ವಿದ್ಯಾರ್ಥಿಗಳು ವ್ಯಾಪಾರ ವಹಿವಾಟಿನಲ್ಲಿ ಇಷ್ಟೊಂದು ಜಾಣರೆ? ಎಂದು ಅಚ್ಚರಿಪಡುವಷ್ಟು ಅವರು ವ್ಯಾಪಾರದಲ್ಲಿ ಮಗ್ನರಾಗಿದ್ದರು.

> ಸಂತಿಗೆ ನಾನು ವಸ್ತುಗಳನ್ನ ತರಾಕ ಒಟ್ಟ 250ರೂ. ಖರ್ಚು ಮಾಡಿದ್ದಿನ್ರಿ. ಈಗ ನನ್ನ ಹತ್ರ ಒಟ್ಟ 375ರೂ ಅದಾವ್ರಿ ಎಂದು ಕಾಯಿಪಲ್ಲೆ ಮಾರಿದ ಹುಡುಗಿ ಹೇಳುವಾಗ ಅವಳ ಮೊಗದಲ್ಲಿ ತಾನು ಏನನ್ನೋ ಸಾಧಿಸಿದೆ ಎಂಬ ಭಾವವಿತ್ತು ಶಿಕ್ಷಕರ ಮೊಗದಲ್ಲಿ ಮಕ್ಕಳ ಸಂತೆ ಮತ್ತು ವಿಜ್ಞಾನ ವಸ್ತು ಪ್ರದರ್ಶನಗಳೆರಡೂ ಯಶಸ್ವಿಯಾದ ಸಾರ್ಥಕತೆ ಇತ್ತು.

ಚಾಯ್ ಚಾಯ್ ಬರೀ ಐದು ರೂಪಾಯಿಗೊಂದು ಚಾಯ್. ಬಿಸಿಬಿಸಿ ಚಾಯ್. ಒಮ್ಮೆ ಕುಡುದ್ರ ಮತ್ತ ಕುಡೀಬೇಕೂ ಅನ್ನೊ ಚಾಯ್ ಬರ್‍ರಿ ಬರ್‍ರಿ ಎಂದು ಕರೆಯುತ್ತಿದ್ದ ಚಾಯ್‌ವಾಲಾನ ಧ್ವನಿ ಎಲ್ಲೆಡೆ ಮಾರ್ದನಿಸುತ್ತಿತ್ತು. ಹಿರಿಯರನ್ನೂ ಮೀರಿಸುವಂತೆ ಮಕ್ಕಳು ಇಂದು ಸಂತೆ ನಡೆಸಿದ್ದನ್ನು ಕಂಡಾಗ ಮುಂದೊಂದು ದಿನ ಇವರು ಪಕ್ಕಾ ವ್ಯಾಪಾರಿಗಳಾಗುವುದರಲ್ಲಿ ಅನುಮಾನ ಇಲ್ಲವೆನ್ನಿಸಿತು.

ಮಕ್ಕಳ ಈ ಚಟುವಟಿಕೆಗೆ ಕಾರಣರಾದವರು ಮುಖ್ಯೋಪಾಧ್ಯಾಯ ಬಿ.ಬಿ. ಕುರಿ, ಎನ್. ಎಲ್. ಚವ್ಹಾಣ. ಎಸ್.ಐ. ಜಗಾಪೂರ, ಎಂ.ಪಿ. ಅಣಗೌಡ್ರ, ಡಿ.ವಿ. ಕಳ್ಳಿ, ಜಿ.ಎ. ಪಾಟೀಲ, ಎಂ.ಎಸ್. ಮಾಳಶೆಟ್ಟಿ, ರಾಜೇಶ್ವರಿ ತೊಂಡಿಹಾಳ, ಸಿಂಧು ಗುಡಿಸಾಗರ ಸಿಬ್ಬಂದಿಯವರು ಮತ್ತು ಇವರಿಗೆ ಪ್ರೋತ್ಸಾಹ ನೀಡಿದ ಎಸ್‌ಡಿಎಂಸಿ ಅಧ್ಯಕ್ಷ ಆನಂದ ಕೊಟಗಿಯವರು.

# ಕಾಲಿಗೆ ಬಿದ್ದ ಶಿಷ್ಯಂದಿರು: ಆಶೀರ್ವದಿಸಿದ ಶಿಕ್ಷಕರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶನಿವಾರದಿಂದ ರಾಜ್ಯಾದ್ಯಂತ ಪಿಯುಸಿ 2ನೇ ವರ್ಷದ ಪರೀಕ್ಷೆಗಳು ಪ್ರಾರಂಭವಾಗಿವೆ. ಅದಕ್ಕಾಗಿ ಪಟ್ಟಣದ ಎಸ್‌ಎ ಪಿಯು ಕಾಲೇಜ್ ಮತ್ತು ಅಭಿನವ ಪಿಯು ಕಾಲೇಜ್‌ಗಳು ಅಲಂಕೃತಗೊಂಡು ವಿದ್ಯಾರ್ಥಿಗಳಿಗೆ ಸಂತಸವನ್ನು ನೀಡುವುದರ ಜೊತೆಗೆ ಅವರಲ್ಲಿ ಪರೀಕ್ಷೆ ಬರೆಯಲು ಆತ್ಮಸ್ಥೈರ್ಯವನ್ನು ತುಂಬಿದವು.



ಸಂಸ್ಥೆಯ ಆಡಳಿತಾಧಿಕಾರಿ ಎನ್.ಆರ್. ಗೌಡರ, ಎರಡೂ ಕಾಲೇಜುಗಳ ಪ್ರಾಚಾರ್ಯರಾದ ವೈ.ಸಿ. ಪಾಟೀಲ ಮತ್ತು ಅನುಸೂಯಾ ಪಾಟೀಲರು ವಿದ್ಯಾರ್ಥಿಗಳಿಗೆ ಸಿಹಿ ಹಂಚಿ ವಿದ್ಯಾರ್ಥಿಗಳಿಗೆ ಧೈರ್ಯ ತುಂಬಿದರು. ಅವರೊಂದಿಗೆ ಎರಡೂ ಕಾಲೇಜುಗಳ ಸಿಬ್ಬಂದಿಯವರು ಮಕ್ಕಳನ್ನು ಪ್ರೀತಿಯಿಂದ ಮಾತನಾಡಿಸಿ ಅವರಲ್ಲಿ ಪರೀಕ್ಷೆಯನ್ನು ಆತ್ಮವಿಶ್ವಾಸದಿಂದ ಎದುರಿಸುವ ಬಗೆಯನ್ನು ಸೊಗಸಾಗಿ ಹೇಳಿಕೊಡುತ್ತಿದ್ದರು.

ಇದಕ್ಕೆ ಪ್ರತಿಯಾಗಿ ಯುದ್ಧ ಗೆಲ್ಲಲು ಹೊರಟ ಸೇನಾನಿಗಳಂತೆ ಒಳ ಬರುತ್ತಿದ್ದ ವಿದ್ಯಾರ್ಥಿಗಳು ತಮ್ಮ ಸಂಸ್ಕಾರ, ಸಂಸ್ಕೃತಿಯನ್ನು ಮರೆಯದೆ ಎದುರಾದ ಎಲ್ಲ ಶಿಕ್ಷಕರ ಕಾಲಿಗೆ ಬಿದ್ದು ಅವರ ಆಶೀರ್ವಾದವನ್ನು ಬೇಡುವ ದೃಶ್ಯ ಪಾಲಕರ ಕಣ್ಣಂಚಿನಲ್ಲಿ ಸಂತಸದ ನೀರನ್ನುಕ್ಕಿಸುತ್ತಿತ್ತು.

ಕಾಲಿಗೆ ಬಿದ್ದ ಪ್ರತಿ ಶಿಷ್ಯರನ್ನೂ ಎತ್ತಿ ಮೈದಡವಿ ಆಶೀರ್ವದಿಸುತ್ತಿದ್ದ ಗುರುಗಳ ಕ್ರಿಯೆಗೆ ಎಲ್ಲರೂ ಶರಣೆಂದರು.

## ವೆಂಕಟೇಶಬಾಬು ಆಲ್ಕೋಡರಿಗೆ ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ಗದಗ

ಧಾರವಾಡದ ಮಂಗಳವಾರ ಪೇಟೆಯ ಮುದಿ ಮರುತಿ ದೇವಸ್ಥಾನದಲ್ಲಿ ನಡೆದ 49ನೇ ಮಹಾಶಿವರಾತ್ರಿ ಸಂಗೀತೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಆಕಾಶವಾಣಿಯ ಎ ಗ್ರೇಡ್ ಕಲಾವಿದ ಗದುಗಿನ ಪಂ. ವೆಂಕಟೇಶಬಾಬು ಆಲ್ಕೋಡರಿಗೆ 'ಸಾಧಕ ಶಿವಪ್ರಶಸ್ತಿ' ನೀಡಿ ಗೌರವಿಸಲಾಯಿತು. ಇವರಿಗೆ ಡಾ. ಪಿ.ಜಿ.ಎ.ಎಸ್. ಸಮಿತಿಯ ಕಾರ್ಯಾಧ್ಯಕ್ಷ ಡಾ. ಪ.ಪೂ. ಕಲ್ಲಯ್ಯಜ್ಜವರು, ಶ್ರೀ ಕೆ.ಕೆ.ಪಿ.ಪಿ.ಜಿ ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯರಾದ ಎಮ್.ಎಸ್. ಹಿರೇಮಠ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ದರಪಟ್ಟಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿಗೆ ಎಂ.ಎಂ.ಇ.ಆರ್. ಅನುದಾನದಡಿಯಲ್ಲಿ ಕಚೇರಿಗೆ ಅವಶ್ಯವಿರುವ ಗಣಕಯಂತ್ರ ಮತ್ತು ಪೀಠೋಪಕರಣಗಳ ಖರೀದಿಗಾಗಿ ಸಾಮಗ್ರಿಗಳಿಗೆ ದರಪಟ್ಟಿ ಸಲ್ಲಿಸಲು 07-03-2025 ಕಚೇರಿಯ ಅವಧಿ ಸಂಜೆ 5.30 ರೊಳಗಾಗಿ ಸಲ್ಲಿಸಲು ದರಪಟ್ಟಿ ಆಹ್ವಾನಿಸಲಾಗಿದೆ. ಅವಧಿ ಮೀರಿ ಬಂದ ಪ್ರಸ್ತಾವನೆಗಳನ್ನು ಸ್ವೀಕರಿಸಲಾಗುವುದಿಲ್ಲ. ಸಂಬಂಧಿಸಿದ ಉಪಕರಣಗಳನ್ನು ಸರಬರಾಜು ಮಾಡಲು ಬಯಸುವ ಅರ್ಹ ಎಜೆನ್ಸಿ ಸಂಸ್ಥೆಯವರು ಹೆಚ್ಚಿನ ಮಾಹಿತಿಗಾಗಿ ಕಚೇರಿಗೆ ಮತ್ತು ದೂರವಾಣಿ ಸಂಖ್ಯೆ-08372-220644 ಸಂಪರ್ಕಿಸಬಹುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 59ನೇ ಶಿವಾನುಭವಗೋಷ್ಠಿಯಲ್ಲಿ ಎಸ್.ಎಸ್. ಹಿರೇಮಠ ಕಿವಿಮಾತು

# ದುಷ್ಟರ ಸಂಗದಿಂದ ದೂರವಿರಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಮ್ಮ ಜೀವನವು ಹಸನಾಗಬೇಕೆಂದರೆ ನಾವು ದುಷ್ಟರ ಸಂಗದಿಂದ ದೂರವಿರಬೇಕು. ಒಮ್ಮೆ ದುಷ್ಟರ ಸಂಗಕ್ಕೆ ಬಿದ್ದರೆ ನಮ್ಮ ಆಲೋಚನೆಗಳು, ನಡೆ-ನುಡಿಗಳೆಲ್ಲವೂ ದುಷ್ಟತನದಿಂದ ಕೂಡಿರುತ್ತವೆ. ಆದ್ದರಿಂದ ಸಹವಾಸ ಮಾಡುವಾಗ ಯೋಚಿಸಿ ಇನ್ನೊಬ್ಬರ ಸಹವಾಸ ಮಾಡಬೇಕೆಂದು ಉಪನ್ಯಾಸಕ ಎಸ್.ಎಸ್. ಹಿರೇಮಠ ಹೇಳಿದರು.

ಪಟ್ಟಣದ ಕೋಡಿಕೊಪ್ಪದಲ್ಲಿನ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಅಕ್ಷರ ಭಾರತ ಪ್ರತಿಷ್ಠಾನ ಗದಗ ಹಾಗೂ ಎಸ್‌ಎವಿವಿಪಿ ಸಮಿತಿ ನರೇಗಲ್ಲ ಇವುಗಳ ಜಂಟಿ ಆಶ್ರಯದಲ್ಲಿ ಜರುಗಿದ 59ನೇ ಶಿವಾನುಭವಗೋಷ್ಠಿಯಲ್ಲಿ ಶರಣರ ವಚನಗಳಲ್ಲಿ ಜನಜೀವನ ಕುರಿತು ಮಾತನಾಡಿದರು.

ಇಂತಹ ಸತ್ಸಂಗ ಮತ್ತು ಪುರಾಣ ಪ್ರವಚನಗಳಿಂದ ನಾವು ಜ್ಞಾನವನ್ನು



ಪಡೆಯಬೇಕು. ಅನುಭಾವಿಗಳ ನುಡಿ, ಸಾಧು ಸಜ್ಜನರ ಸಂಗಗಳು ನಮಗೆ ಸರಿಯಾದ ಜೀವನ ನಡೆಸಲು ದಾರಿದೀಪಗಳಾಗಿವೆ. ಬದುಕು ಒಂದು ಮಕರಂದವಾಗಬೇಕು. ಹೀಗೆ ಮಕರಂದವಾಗಲು ಅದಕ್ಕೆ ಶರಣರ ವಚನಗಳ ಆಧಾರವಿರಬೇಕೆಂದು ಹಿರೇಮಠ ಹೇಳಿದರು.

ನಮ್ಮೆಲ್ಲರ ಬದುಕು ಭಗವಂತ ನೀಡಿದ ಒಂದು ದೊಡ್ಡ ಕೊಡುಗೆ. ಈ ಜೀವನ ಇತರರ ಉಪಕಾರಕ್ಕಾಗಿ ಮೀಸಲಿರಬೇಕು. ನಾನು, ನನ್ನದು ಎನ್ನುವ ಬದಲಾಗಿ ನಾವು, ನಮ್ಮವರು ಎನ್ನಬೇಕು. ನಮ್ಮ ಜೀವನ ಎಂದಿಗೂ ಅಸ್ಥಿರ. ನಾವು ಗಳಿಸಿದ ಆಸ್ತಿ, ಸಂಪತ್ತು ನಮ್ಮ ಹಿಂದೆ ಬರುವುದಿಲ್ಲ, ಬದಲಾಗಿ ನಾವು ಗಳಿಸಿದ ಧರ್ಮಕಾರ್ಯ, ಕೀರ್ತಿ ನಮ್ಮೊಂದಿಗೆ ಬರುತ್ತದೆ.

ನಮ್ಮ ಬದುಕು ಹಸನಾಗಲು ಗುರುವಿನ ಅನುಗ್ರಹ ಕಾರಣವಾಗುತ್ತದೆ. ಇದರಿಂದ ನಮ್ಮ ಜೀವನದಲ್ಲಿ ಶಾಂತಿ, ನೆಮ್ಮದಿ ದೊರಕುತ್ತದೆ. ಅದಕ್ಕೆ ವಚನಗಳ ಹಿನ್ನೆಲೆಯೂ ದೊರೆತರೆ ನಮ್ಮ ಬದುಕು ಯಶಸ್ವಿಯಾಗುತ್ತದೆ. 12ನೇ ಶತಮಾನದ ಶರಣರು ನಮ್ಮ ನಿತ್ಯದ ಜೀವನಕ್ಕೆ ಏನೆಲ್ಲ ಬೇಕೋ ಅದೆಲ್ಲವನ್ನೂ ವಚನಗಳಲ್ಲಿ ಬರೆದಿಟ್ಟಿದ್ದಾರೆ. ಆದ್ದರಿಂದ ವಚನಗಳ ಪಠಣೆಯನ್ನು ನಿಮ್ಮ ಜೀವನದ ಉಸಿರನ್ನಾಗಿಸಿಕೊಳ್ಳಿ ಎಂದು ಹಿರೇಮಠ ಹೇಳಿದರು.

ಆಡಳಿತಾಧಿಕಾರಿ ಎನ್.ಆರ್. ಗೌಡರ, ಎಂ.ಎ. ಹಿರೇವಡೆಯರ, ಡಾ. ಆರ್.ಕೆ. ಗಚ್ಚಿನಮಠ, ಎಂ.ಎಸ್. ದಢೇಸೂರಮಠ, ಸಂಗಯ್ಯ ಪ್ರಭುಸ್ವಾಮಿಮಠ ಇತರರಿದ್ದರು. ಡಾ. ಕಲ್ಲಯ್ಯ ಹಿರೇಮಠ ನಿರೂಪಿಸಿದರು. ಎಸ್.ಎನ್. ಹೂಲಗೇರಿ ಸ್ವಾಗತಿಸಿದರು. ಎಚ್.ಎಂ. ಹಾದಿಮನಿ ವಂದಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಶ್ರೀ ಮುಪ್ಪಿನ ಬಸವಲಿಂಗ ಸ್ವಾಮೀಜಿ ಆಶೀರ್ವಚನ ನೀಡಿ, ನಮ್ಮ ಜೀವನದ ಅನುಭವಗಳನ್ನು ವ್ಯಕ್ತಪಡಿಸುವುದೇ ಶಿವಾನುಭವವಾಗಿದೆ. ನಾವು ಆಕಾರದಿಂದ ಮನುಷ್ಯರಾಗಿದ್ದೇವೆ ಆದರೆ ಆಚಾರದಿಂದಲ್ಲ. ನಮ್ಮ ಜೀವನದಲ್ಲಿ ಆಚಾರಗಳ ಅಳವಡಿಕೆಯಾಗಬೇಕಾದರೆ ಇಂತಹ ಶಿವಾನುಭವಗಳ ಅವಶ್ಯಕತೆ ಇದ್ದೇ ಇದೆ. ಶರಣರ ವಚನಗಳಲ್ಲಿ ಇರುವ ಜನಜೀವನವನ್ನು ನಾವು ಅಧ್ಯಯನ ಮಾಡಬೇಕು. 12ನೇ ಶತಮಾನದ ವಚನಕಾರರು ಕನ್ನಡ ಸಾಹಿತ್ಯಕ್ಕೆ ದೊಡ್ಡದಾದ ಕೊಡುಗೆಯನ್ನೇ ನೀಡಿದ್ದಾರೆ. ಆದ್ದರಿಂದ ವಚನ ಸಾಹಿತ್ಯದ ಅಧ್ಯಯನ ನಿಮ್ಮ ಜೀವನದಲ್ಲಿ ಅಳವಡಿಕೆಯಾಗಬೇಕೆಂದು ತಿಳಿಸಿದರು.

# ಅರ್ಥಿಕ ಸಂಗತಿಗಳ ಜ್ಞಾನ ಅವಶ್ಯಕ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಘಟನೆಯ ಮೂಲಕ ಸಮಸ್ಯೆಗಳು ನಿವಾರಣೆಯಾಗಬಲ್ಲವು. ಅದರಲ್ಲೂ ಶಿಕ್ಷಣ ಸಮುದಾಯದಲ್ಲಿ ವಿವಿಧ ಕಾರಣಗಳಿಂದ ಸಮಸ್ಯೆಗಳು ಎದುರಾಗುತ್ತಿದ್ದು, ಅಂತಹ ಸಮಸ್ಯೆಗಳನ್ನು ಸಂಘಟನೆಯಿದ ಮಾತ್ರ ಪರಿಹರಿಸಲು ಸಾಧ್ಯ ಎಂದು ಜಿ.ಎಸ್.ಎಸ್ ಮಹಾವಿದ್ಯಾಲಯದ ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ಶೌಕತಅಲಿ ಮೇಗಲಮನಿ ನುಡಿದರು.



ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡದ ಸಮಾಜ ವಿಜ್ಞಾನ ಮೌಲ್ಯಮಾಪನ ಕೇಂದ್ರದಲ್ಲಿ ಜರುಗಿದ ಕರ್ನಾಟಕ ವಿಶ್ವವಿದ್ಯಾಲಯದ ಕಾಲೇಜು ಅರ್ಥಶಾಸ್ತ್ರ ಪ್ರಾಧ್ಯಾಪಕ ಪರಿಷತ್ತಿನ ಸಾಮಾನ್ಯ ಸಭೆಯಲ್ಲಿ ಅವರು ಮಾತನಾಡಿದರು.

ಪ್ರಪಂಚದಲ್ಲಿ ಹಣದಿಂದಲೇ ಎಲ್ಲಾ ಚಟುವಟಿಕೆಗಳು ನಡೆಯುತ್ತವೆ. ಈ ಹಣವನ್ನು ಅರ್ಥಶಾಸ್ತ್ರ ಮಾತ್ರ ವ್ಯಯಸ್ಥಿತವಾಗಿ ಅಧ್ಯಯನ ಮಾಡುತ್ತಿದ್ದು, ಇಂತಹ ಆರ್ಥಿಕ ಸಂಗತಿಗಳ ಬಗ್ಗೆ ಸಮಾಜದ ಪ್ರತಿಯೊಬ್ಬರಿಗೂ ಜ್ಞಾನವಿರಬೇಕು. ಈ ನಿಟ್ಟದಲ್ಲಿ ಪರಿಷತ್ತಿನ ಸದಸ್ಯರ ಪ್ರಯತ್ನ ಬೇಕೆಂದು ಹೇಳಿದರು.

ಪರಿಷತ್ತಿನ ಉಪಾಧ್ಯಕ್ಷರಾಗಿ ಡಾ. ರವಿ ನಾಯಿಕ, ಕಾರ್ಯದರ್ಶಿಯಾಗಿ ಡಾ. ಸುರೇಶ ನ್ಯಾಮತಿ, ಖಜಾಂಚಿಯಾಗಿ ಪ್ರೊ. ಪ್ರಸನ್ನ ಪಾಂಡ್ರೆ ಆಯ್ಕೆಗೊಂಡಿದ್ದು, ಜಂಟಿ ಕಾರ್ಯದರ್ಶಿಯಾಗಿ ಡಾ. ಅನ್ನಪೂರ್ಣ, ಗದಗ ಜಿಲ್ಲಾ ಉಪಾಧ್ಯಕ್ಷರಾಗಿ ಡಾ. ವ್ಹಿ.ಎ. ನಿಂಗೋಜಿ, ಧಾರವಾಡ ಜಿಲ್ಲಾ ಉಪಾಧ್ಯಕ್ಷರಾಗಿ ಡಾ. ಮನೋಹರ ಸಿ.ಪಿ., ಕಾರವಾರ ಜಿಲ್ಲಾ ಉಪಾಧ್ಯಕ್ಷರಾಗಿ ಪ್ರೊ. ಸುನೀತಾ ಜೋಗ, ಡಾ. ದೇವದಾಸ ಪ್ರಭು ಆಯ್ಕೆಗೊಂಡರು.

ಮಹಿಳಾ ಪ್ರತಿನಿಧಿಯಾಗಿ ಪ್ರೊ. ಸರಸ್ವತಿ ಪಾಟೀಲ, ಪ್ರೊ. ಪರವೀನ ಶೇಖ, ಪ್ರೊ. ಜಯಲಕ್ಷ್ಮೀ ಹೆಚ್.ಎಸ್., ಅತಿಥಿ ಪ್ರಾಧ್ಯಾಪಕರ ಪ್ರತಿನಿಧಿಯಾಗಿ ಪ್ರೊ. ಎಸ್.ಎನ್. ಪಾಟೀಲ, ಪ್ರೊ. ಎಸ್.ಜಿ. ಉಳಗೇರ, ಪ್ರೊ. ಯಮನೂರ ಆಯ್ಕೆಗೊಂಡರು. ಸಮಾರಂಭದಲ್ಲಿ ಪ್ರೊ. ಬಿ.ಎಂ. ನದ್ದಿಮುಲ್ಲಾ ಮಾತನಾಡಿದರು. ಡಾ. ಸುರೇಶ ನ್ಯಾಮತಿ ವಂದಿಸಿದರು.

## ಆಕರ್ಷಿಸಿದ 'ತಬಲಾ ಸೋಲೋ' ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಪವಿತ್ರ ಕ್ಷೇತ್ರವಾದ ಶಿವಯೋಗ ಮಂದಿರದ 115ನೇ ಜಾತ್ರಾ ಮಹೋತ್ಸವ ಹಾಗೂ ಶ್ರೀ ಕುಮಾರೇಶ್ವರರ 95ನೇ ಪುಣ್ಯಸ್ಮರಣೋತ್ಸವ ಇತ್ತೀಚೆಗೆ ಜರುಗಿತು.

ಕಾರ್ಯಕ್ರಮದ ಮುನ್ನಾದಿನ ಮಹಾಶಿವರಾತ್ರಿ ಶುಭದಿನಂದು ಡಾ. ಪಿ.ಜಿ.ಎ.ಎಸ್. ಸಮಿತಿಯ ಶ್ರೀ ಕುಮಾರೇಶ್ವರ ಕೃಪಾಪೋಷಿತ ಪಂಡಿತ ಪಂಚಾಕ್ಷರ ಗವಾಯಿಗಳವರ ಸಂಗೀತ ಪಾಠಶಾಲೆಯ ತಬಲಾ ಶಿಕ್ಷಕರಾದ ರಾವುತಪ್ಪ ಎಮ್.ಹೂಗಾರರ ವಿದ್ಯಾರ್ಥಿಗಳಿಂದ ತಬಲಾ ಸೋಲೋ ಕಾರ್ಯಕ್ರಮವು ಉತ್ತಮವಾಗಿ ಮೂಡಿಬಂದಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಹಾಗೂ ಸಂಗೀತ ಶಾಲೆಗೆ ಡಾ. ಪಿ.ಜಿ.ಎ.ಎಸ್. ಸಮಿತಿಯ ಕಾರ್ಯಾಧ್ಯಕ್ಷರಾದ ಡಾ. ಪ.ಪೂ. ಕಲ್ಲಯ್ಯಜ್ಜವರು, ಕಾರ್ಯದರ್ಶಿಗಳಾದ ಜಿ.ಎಸ್. ಪಾಟೀಲರು, ಸಂಗೀತ ಪಾಠಶಾಲೆಯ ಮುಖ್ಯೋಪಾಧ್ಯಾಯರಾದ ಎಮ್.ಎಸ್. ಹಿರೇಮಠ, ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ವರ್ಗದವರು ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

# ಕೆಎಲ್‌ಇ ಕಾಲೇಜಿನಲ್ಲಿ ಫ್ರೇಶರ್ಸ್ ಡೇ



■ವಿಜಯಸಾಕ್ಷಿ ಸುದ್ದಿ, ಗದಗ

ಗದಗಿನ ಕೆಎಲ್‌ಇ ಸಂಸ್ಥೆಯ ಔಷಧ ಮಹಾವಿದ್ಯಾಲಯದಲ್ಲಿ ವಾರ್ಷಿಕ ಸ್ನೇಹ ಸಮ್ಮೇಳನ ಮತ್ತು 2024-25 ಸಾಲಿನ ಬಿ.ಫಾರ್ಮ ಮತ್ತು ಡಿ.ಫಾರ್ಮ ವಿದ್ಯಾರ್ಥಿಗಳಿಗೆ ಫ್ರೆಶರ್ಸ್ ಡೇ ಕಾರ್ಯಕ್ರಮ 'ಫಾರ್ಮ ಸಂಭ್ರಮ' ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಅತಿಥಿಗಳು ಚಾಲನೆ ನೀಡಿದರು.

ಮುಖ್ಯ ಅತಿಥಿಯಾಗಿ ಸಹಾಯಕ ಔಷಧ ನಿಯಂತ್ರಕ ನೀಲಕಂಠ ರಾಠೋಡ್ ಆಗಮಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ರಮೇಶ ವ್ಹಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಅಗಮಿಸಿದ ನೀಲಕಂಠ ರಾಠೋಡ್ ವಿದ್ಯಾರ್ಥಿಗಳಿಗೆ ಅವರ ಭವಿಷ್ಯದ ಸಾಧನೆಗಳಿಗೆ ಮಾರ್ಗದರ್ಶನ ನೀಡಿದರು.

ಪ್ರಾಂಶುಪಾಲ ಡಾ. ರಮೇಶ ವ್ಹಿ ಮಹಾವಿದ್ಯಾಲಯದ ವಾರ್ಷಿಕ ವರದಿಯನ್ನು ಓದಿದರು. ನಂತರ ವಿವಿಧ ಕ್ಷೇತ್ರದಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಬಹುಮಾನ ಮತ್ತು ಪ್ರಶಂಸಾ ಪತ್ರಗಳನ್ನು ವಿತರಿಸಲಾಯಿತು.

### ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಆರೋಪ

# ನಗರಸಭೆ ಚುನಾವಣೆ ಅಸಂವಿಧಾನಿಕ

■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆಯ 2ನೇ ಅವಧಿಗೆ ನಡೆದ ಅಧ್ಯಕ್ಷ-ಉಪಾಧ್ಯಕ್ಷ ಚುನಾವಣೆಯಲ್ಲಿ ಎಲ್ಲ ಅಧಿಕಾರಿಗಳನ್ನು ತಮ್ಮ ಪರವಾಗಿ ಬಳಸಿಕೊಳ್ಳುವ ಮೂಲಕ ಕಾನೂನು ಸಚಿವರು ಕಾನೂನು ಉಲ್ಲಂಘನೆ ಮಾಡಿದ್ದಾರೆ. ಕೂಡಲೇ ಅವರು ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರಡಗಿ ಒತ್ತಾಯಿಸಿದ್ದಾರೆ.

ಅವರು ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ನಗರದಲ್ಲಿ ನಡೆದ ಚುನಾವಣೆ ಪ್ರಕ್ರಿಯೆ ಇಡೀ ರಾಜ್ಯವೇ ತಲೆತಗ್ಗಿಸುವಂತಿದೆ. ಚುನಾವಣೆ ಮುಂದೂಡುವಂತೆ ಕೋರ್ಟ್ ಆದೇಶ ನೀಡಿದ್ದರೂ ಸಚಿವರು ತಮ್ಮ ಅಧಿಕಾರ ದುರೂಪಯೋಗಪಡಿಸಿಕೊಂಡು ಎಲ್ಲ




ಅಧಿಕಾರಿಗಳಿಂದ ತಮ್ಮ ಪರವಾಗಿ ಕೆಲಸ ಮಾಡಿಸಿಕೊಂಡಿದ್ದಾರೆ. ಸಂಪೂರ್ಣ ಆಯ್ಕೆ ಪ್ರಕ್ರಿಯೆ ಅಸಾಂವಿಧಾನಿಕವಾಗಿದೆ ಎಂದರು.

ನ್ಯಾಯಾಲಯ ಆದೇಶ ನೀಡಿದ್ದರೂ ಅದನ್ನು ಗಣನೆಗೆ ತೆಗೆದುಕೊಳ್ಳದೇ ಸಚಿವರ ಕೈಗೊಂಬೆಯಾಗಿ ವರ್ತಿಸಿ ಚುನಾವಣೆ ನಡೆಸಿದ ಉಪವಿಭಾಗಾಧಿಕಾರಿಗಳ ವಿರುದ್ಧ ಕಾನೂನು ಹೋರಾಟ ಮಾಡಲಾಗುವುದು. ಚುನಾವಣೆಯನ್ನು ಪಕ್ಷಪಾತವಾಗಿ ನಡೆಸಿರುವ ಅಧಿಕಾರಿಯನ್ನು ತಕ್ಷಣವೇ ಅಮಾನತು ಮಾಡಬೇಕು ಎಂದು ಜಿಲ್ಲಾಧಿಕಾರಿಗೂ ಮನವಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಬಿಜೆಪಿ ನಗರಸಭಾ ಸದಸ್ಯ ಚಂದ್ರು ತಡಸದ ಮಾತನಾಡಿ, ಫೆ.28ರಂದೇ ಚುನಾವಣೆ ಇರುವುದರಿಂದ ಸದಸ್ಯತ್ವ ರದ್ದುಗೊಳಿಸಿ ಆರ್‌ಸಿ ಅವರು ನೀಡಿರುವ ಆದೇಶ ರದ್ದು ಮಾಡಬೇಕು. ಇಲ್ಲ ಚುನಾವಣೆ ಮುಂದೂಡುವಂತೆ ಅರ್ಜಿ ಸಲ್ಲಿಸಿದ್ದೆವು. ನಮ್ಮ ಅರ್ಜಿ ಪರಿಶೀಲಿಸಿದ ನ್ಯಾಯಾಲಯವು ಬುಧವಾರದವರೆಗೆ ಚುನಾವಣೆ ಮುಂದೂಡುವಂತೆ ಆದೇಶ ನೀಡಿತ್ತು. ಆದರೆ, ಚುನಾವಣಾಧಿಕಾರಿಯಾದ ಗಂಗಪ್ಪ ಎಂ ಅವರು ನ್ಯಾಯಾಲಯದ ಆದೇಶ ಪರಿಪಾಲನೆ ಮಾಡದೇ ಚುನಾವಣೆ ನಡೆಸಿದ್ದು ನ್ಯಾಯಾಂಗ ನಿಂದನೆ ಆಗಲಿದೆ. ಇದರ ವಿರುದ್ಧ ನಾವು ಕಾನೂನು ಹೋರಾಟ ಮುಂದುವರೆಸುತ್ತೇವೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ನಗರಸಭೆ ಸದಸ್ಯರಾದ ವಿನಾಯಕ ಮಾನ್ವಿ, ಮಾಧುಸಾ ಮೇರವಾಡೆ, ವಿಜಯಲಕ್ಷ್ಮೀ ದಿಂಡೂರ ಸೇರಿದಂತೆ ವಿವಿಧ ಸದಸ್ಯರು ಇದ್ದರು.

ನಗರಸಭೆ ಅಧ್ಯಕ್ಷ, ಉಪಾಧ್ಯಕ್ಷ ಚುನಾವಣೆ ಗೆಲ್ಲುವ ಉದ್ದೇಶದಿಂದಲೇ ನಮ್ಮವರ ಸದಸ್ಯತ್ವ ರದ್ದುಗೊಳಿಸಲಾಗಿದೆ. ಕಾಂಗ್ರೆಸ್‌ನವರು ಅಸಾಂವಿಧಾನಿಕವಾಗಿ ಚುನಾವಣೆ ಗೆದ್ದಿದ್ದಾರೆ. ಇದನ್ನು ಬಿಜೆಪಿಯ ಎಲ್ಲ ಸದಸ್ಯರು ಖಂಡಿಸುತ್ತೇವೆ ಎಂದು ಬಿಜೆಪಿ ನಗರಸಭಾ ಸದಸ್ಯ ಚಂದ್ರು ತಡಸದ ಹೇಳಿದರು.

# ಲಿಂಗತ್ವ ಅಲ್ಪಸಂಖ್ಯಾತರಿಗೆ ಹಣ ಮೀಸಲಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನ ಬಜೆಟ್‌ನಲ್ಲಿ ಲಿಂಗತ್ವ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ಪ್ರತ್ಯೇಕ ಹಣ ಮೀಸಲಿಡಬೇಕು ಎಂದು ಲಿಂಗತ್ವ ಮತ್ತು ಲೈಂಗಿಕ ಬಹುತ್ವಕ್ಕಾಗಿ ಚಳುವಳಿಯ ರಾಜ್ಯ ಸಹ ಸಂಚಾಲಕಿ ವೈಶಾಲಿ ಹೇಳಿದರು.

ನಗರದ ಪತ್ರಿಕಾಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಜ್ಯದಲ್ಲಿ ಲಿಂಗತ್ವ ಅಲ್ಪಸಂಖ್ಯಾತರ 46 ಸಾವಿರ ಜನಸಂಖ್ಯೆಯಿದೆ. ಜಿಲ್ಲೆಯಲ್ಲಿ 1550 ಜನರು ಇದ್ದಾರೆ. ಹೀಗಾಗಿ ಆಡಳಿತದಲ್ಲಿರುವ ಕಾಂಗ್ರೆಸ್ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬರುವ ಮುನ್ನ ತಮ್ಮ ಪ್ರಣಾಳಿಕೆಯಲ್ಲಿ ಲೈಂಗಿಕ ಅಲ್ಪಸಂಖ್ಯಾತರ ಅಭಿವೃದ್ಧಿಗಾಗಿ ವಾರ್ಷಿಕ 200 ಕೋಟಿ ರೂ.ಹಣವನ್ನು ಮೀಸಲಿಡಲಾಗಿದೆ. ಆದರೆ ಅದನ್ನು ಇನ್ನೂ ಜಾರಿಗೆ ತಂದಿಲ್ಲ. ಕೂಡಲೇ ಹಣವನ್ನು ಬಿಡುಗಡೆ ಮಾಡಬೇಕು




ಎಂದರು.

ಲಿಂಗತ್ವ ಅಲ್ಪಸಂಖ್ಯಾತರಿಗೆ ವಸತಿ ಸೌಲಭ್ಯ ನೀಡಬೇಕು. ನಮ್ಮ ಸಮುದಾಯದವರಿಗೆ ವಸತಿಗಾಗಿ ಪ್ರತ್ಯೇಕವಾದ ಯೋಜನೆ ರೂಪಿಸಬೇಕು. ಲಿಂಗತ್ವ ಅಲ್ಪಸಂಖ್ಯಾತರು ಉದ್ಯಮ ಶೀಲತೆಯಲ್ಲಿ ತೊಡಗಿಸಿಕೊಳ್ಳಲು ಯೋಜನೆ ರೂಪಿಸಬೇಕು. ಪ್ರತಿ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗೆ 2 ಲಕ್ಷ ರೂ ಆರ್ಥಿಕ ನೆರವು ನೀಡಲು ಬಜೆಟ್ ಮೀಸಲಿಡಬೇಕು. ಉಚಿತ ಲಿಂಗ ಪರಿವರ್ತನೆ ಶಸ್ತ್ರ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆಯ ನಂತರ 6 ತಿಂಗಳ ಆರೈಕೆಯ ಬೆಂಬಲ ನೀಡಲು ಬಜೆಟ್ ಮೀಸಲಿಡಬೇಕು. ಶೇ.1 ಮೀಸಲಾತಿಯಲ್ಲಿ ಉದ್ಯೋಗವನ್ನು ಪಡೆಯಲು ಸರ್ಕಾರವು ಲಿಂಗತ್ವ ಅಲ್ಪಸಂಖ್ಯಾತರಿಗೆ ತರಬೇತಿ ಮತ್ತು ಕೋಚಿಂಗ್ ನೀಡಲು ಬಜೆಟ್ ಮೀಸಲಿಡಬೇಕು. ಲಿಂಗತ್ವ ಮತ್ತು ಲೈಂಗಿಕ ಅಲ್ಪಸಂಖ್ಯಾತರ ಸರ್ವತೋಮುಖ ಅಭಿವೃದ್ಧಿಗಾಗಿ ವಾರ್ಷಿಕ ರೂ. 200 ಕೋಟಿಯನ್ನು ಮೀಸಲಿಡಬೇಕು. ಇದಕ್ಕಾಗಿ ಪ್ರತ್ಯೇಕವಾಗಿ ನಿಯಮವನ್ನು ಸ್ಥಾಪಿಸಬೇಕು ಎಂದು ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಆದಿತ್ಯ ಬಾಂಡಿಗೆ, ಪುಷ್ಪ ಬಿಜಾಪುರ, ಆರಾಧನಾ ಬಣಕಾರ ಇದ್ದರು.

# ಶಿಕ್ಷಣಕ್ಕೆ ಅನುಗುಣವಾಗಿ ಉದ್ಯೋಗಾವಕಾಶ

▶▶ಮೊದಲನೇ ಪುಟದಿಂದ






ಅಭ್ಯರ್ಥಿಗಳು ಕೇವಲ ಸರ್ಕಾರಿ ನೌಕರಿ ಮೇಲೆ ಅವಲಂಬನೆಯಾಗದೆ ಖಾಸಗಿ ಹಾಗೂ ಸ್ವಾವಲಂಬಿ ಉದ್ಯೋಗಿಗಳಾಗಲು ಕರೆ ನೀಡಿದರು.

ಗದಗ - ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕಾಧ್ಯಕ್ಷ ಅಶೋಕ ಮಂದಾಲಿ, ಗದಗ - ಬೆಟಗೇರಿನಗರ ಸಭೆಯ ನೂತನ ಅಧ್ಯಕ್ಷ ಕೃಷ್ಣ ಪರಾಪೂರ, ಉಪಾಧ್ಯಕ್ಷೆ ಶಕುಂತಲಾ ಅಕ್ಕಿ, ಸಿದ್ದು ಪಾಟೀಲ, ಕೃಷ್ಣಗೌಡ ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿ.ಪಂ ಯೋಜನಾ ನಿರ್ದೇಶಕ ಎಂ.ವಿ. ಚಳಗೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಡಾ. ಮಲ್ಲೂರ ಬಸವರಾಜ ಹಾಜರಿದ್ದರು.

## 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಚಾಲನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಜ್ಯೋತಿ ಬೆಳಗಿಸುವ ಮೂಲಕ ಚಾಲನೆ ನೀಡಿದರು. ವಿಧಾನಸೌಧದ ಗ್ರಾಂಡ್ ಸ್ಟೆಪ್ಸ್ ನಲ್ಲಿ ಈ ಕಾರ್ಯಕ್ರಮ ಜರುಗಿದ್ದು, ಈ ವೇಳೆ, ನಟ ಶಿವರಾಜ್‌ಕುಮಾರ್ ಚಲನಚಿತ್ರೋತ್ಸವದ ಕೈಪಿಡಿ ಬಿಡುಗಡೆ ಮಾಡಿದರು.

ಶನಿವಾರದಿಂದ ಎಂಟು ದಿನಗಳ ಕಾಲ 16ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ ನಡೆಯಲಿದ್ದು, 60ಕ್ಕೂ ಹೆಚ್ಚು ವಿದೇಶಿ ಚಲನಚಿತ್ರಗಳು ಪ್ರದರ್ಶನಗೊಳ್ಳಲಿದೆ. ದೇಶ- ವಿದೇಶಗಳ ಸಿನಿಮಾ ಪ್ರದರ್ಶನ ಕಾಣಲಿದೆ.

ಕಾರ್ಯಕ್ರಮ ಉದ್ಘಾಟನೆ ಬಳಿಕ ಮಾತನಾಡಿದ ಸಿಎಂ ಸಿದ್ದರಾಮಯ್ಯ, ಡಾ.ರಾಜ್ ಕುಮಾರ್ ಅವರ ಸಿನಿಮಾಗಳಲ್ಲಿದ್ದ ಮೌಲ್ಯಗಳು ಮತ್ತು ಘನತೆ ಈಗಿನ ಸಿನಿಮಾಗಳಲ್ಲಿ ಕಾಣುತ್ತಿಲ್ಲ. ರಾಜ್ ಕುಮಾರ್ ಸಿನಿಮಾಗಳಲ್ಲಿ ಸೌಹಾರ್ದ ಮತ್ತು ಮಾನವೀಯ ಮೌಲ್ಯಗಳು ತುಂಬಿರುತ್ತಿದ್ದವು. ಹೀಗಾಗಿ ಸರ್ವರಿಗೂ ಇವರ ಸಿನಿಮಾಗಳು ಇಷ್ಟ ಆಗುತ್ತಿದ್ದವು. ಮೌಢ್ಯಗಳನ್ನು ಬಿತ್ತುವ, ಸಂವಿಧಾನದ ಮೌಲ್ಯಗಳಿಗೆ ವಿರುದ್ಧವಾದ ಸಿನಿಮಾಗಳು ಸಮಾಜಕ್ಕೆ ಒಳ್ಳೆಯದಲ್ಲ. ಬಸವಣ್ಣನವರು ಕರ್ಮ ಸಿದ್ಧಾಂತವನ್ನು ತಿರಸ್ಕರಿಸಿದ್ದರು. ಸಿನಿಮಾಗಳು ಮತ್ತೆ ಮೌಢ್ಯಗಳನ್ನು ಬಿತ್ತುವುದಕ್ಕೆ ಹೋಗಬಾರದು ಎಂದು ಸಿದ್ದರಾಮಯ್ಯ ಹೇಳಿದ್ದಾರೆ.

"ವಿಶ್ವದರ್ಜೆಯ ಫಿಲ್ಮ್ ಸಿಟಿ ಮೈಸೂರಿನಲ್ಲಿ ನಿರ್ಮಿಸುತ್ತೇವೆ. ಇದಕ್ಕಾಗಿ ಈಗಾಗಲೇ 150 ಎಕರೆ ಜಾಗವನ್ನು ನೀಡಲಾಗಿದೆ. ಕರ್ನಾಟಕವೇ ಒಂದು ಜಗತ್ತು. ಇಲ್ಲಿ ಎಲ್ಲ ಅವಕಾಶಗಳನ್ನು ಸೃಷ್ಟಿಸಬಹುದು. ಇದಕ್ಕಾಗಿ ವಿಶ್ವ ದರ್ಜೆಯ ಅತ್ಯುನ್ನತ ಗುಣಮಟ್ಟದ ಫಿಲ್ಮ್ ಸಿಟಿಯನ್ನು ಮೈಸೂರಿನಲ್ಲಿ ನಿರ್ಮಿಸುತ್ತಿದ್ದೇವೆ. ತಂತ್ರಜ್ಞಾನದ ಜೊತೆಗೆ ಮಾನವೀಯ ಮೌಲ್ಯಗಳನ್ನು ಬೆಸೆಯುವ ಸಿನಿಮಾಗಳನ್ನು ವಿಶ್ವದರ್ಜೆ ಗುಣಮಟ್ಟದಲ್ಲಿ ಇಲ್ಲಿ ನಿರ್ಮಾಣ ಆಗಬೇಕು" ಎಂದರು.

ನಮ್ಮಲ್ಲಿ ಅಸಹನೆ ಹೆಚ್ಚುತ್ತಿರುವುದರಿಂದ ಸಮಾಜದಲ್ಲಿ ಅಸಂತೋಷ ಹೆಚ್ಚುತ್ತಿದೆ. ಸಂಪತ್ತಿನ ಅಸಮಾನ ಹಂಚಿಕೆ ಈ ಅಸಂತೋಷಕ್ಕೆ ಕಾರಣ.

### ಜಿಲ್ಲೆಯ ಐತಿಹಾಸಿಕ, ಸಾಂಸ್ಕೃತಿಕ, ಶಿಲ್ಪಕಲೆ ಸಾಹಿತ್ಯವನ್ನು ಬಿಂಬಿಸುವ ವೈಶಿಷ್ಟ್ಯಪೂರ್ಣ ಪ್ರದರ್ಶನ

# ಜನಾಕರ್ಷಣೆಯ ಫಲಪುಷ್ಪ ಪ್ರದರ್ಶನ, ಸರಸ್ ಮೇಳ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಐತಿಹಾಸಿಕ, ಸಾಂಸ್ಕೃತಿಕ ಶಿಲ್ಪಕಲೆ ಸಾಹಿತ್ಯವನ್ನು ಬಿಂಬಿಸುವ ವೈಶಿಷ್ಟ್ಯಪೂರ್ಣ ಪ್ರದರ್ಶನ ಇದಾಗಿದೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಕೆ.ಹೆಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಹತ್ತಿರವಿರುವ ವಿ.ಡಿ.ಎಸ್.ಟಿ ಮೈದಾನದಲ್ಲಿ ಮಾರ್ಚ್ 1ರಿಂದ ಮಾರ್ಚ್ 3ರವರೆಗೆ ಗದಗ ಜಿಲ್ಲಾ ಪಂಚಾಯತ, ತೋಟಗಾರಿಕೆ ಇಲಾಖೆ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕರ್ನಾಟಕ ರಾಜ್ಯ ಗ್ರಾಮೀಣ ಜೀವನೋಪಾಯ ಸಂವರ್ಧನಾ ಸಂಸ್ಥೆ ಇವರ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿರುವ ಫಲಪುಷ್ಪ ಪ್ರದರ್ಶನ ಹಾಗೂ ಜಿಲ್ಲಾ ಮಟ್ಟದ ಸರಸ್ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ಬೆಳೆದ ಹೂವು ಮತ್ತು ಹಣ್ಣುಗಳ ಪ್ರದರ್ಶನ ಹಾಗೂ ಗ್ರಾಮೀಣ ಪ್ರದೇಶದ ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ವಿವಿಧ ವಸ್ತುಗಳ ಪ್ರದರ್ಶನ ಮತ್ತು ಮಾರಾಟಕ್ಕೆ ಅವಕಾಶ ಕಲ್ಪಿಸಲಾಗಿದೆ. ಸ್ವ-ಸಹಾಯ ಗುಂಪಿನ ಮಹಿಳೆಯರು ತಯಾರಿಸಿದ ವಸ್ತುಗಳಿಗೆ ಮಾರುಕಟ್ಟೆ ಬೆಂಬಲ ನೀಡುವ ಉದ್ದೇಶದಿಂದ ಸರಸ್ ಮೇಳವನ್ನು ಸಹ ಆಯೋಜಿಸಲಾಗಿದೆ ಎಂದು ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ವಿ.ಪ ಸದಸ್ಯ ಎಸ್.ವಿ. ಸಂಕನೂರ, ಗದಗ-ಬೆಟಗೇರಿ ನಗರಸಭೆ ಅಧ್ಯಕ್ಷ ಕೃಷ್ಣ ಪರಾಪೂರ, ಉಪಾಧ್ಯಕ್ಷೆ ಶಕುಂತಲಾ ಅಕ್ಕಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ, ತಾಲೂಕು ಅಧ್ಯಕ್ಷ ಅಶೋಕ ಮಂದಾಲಿ, ಕೃಷ್ಣಗೌಡ ಪಾಟೀಲ, ಸಿದ್ದು ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ತೋಟಗಾರಿಕಾ ಇಲಾಖೆಯ ಉಪನಿರ್ದೇಶಕ ಶಶಿಕಾಂತ ಕೋಟಿಮನಿ ಸೇರಿದಂತೆ ಗಣ್ಯರು, ಹಿರಿಯರು ಪಾಲ್ಗೊಂಡಿದ್ದರು.

ಕಲ್ಲಂಗಡಿ ಹಣ್ಣಿನಲ್ಲಿ ಅರಳಿದ ಸಿದ್ದೇಶ್ವರ ಸ್ವಾಮೀಜಿ, ಪಂಡಿತ ಪುಟ್ಟರಾಜ ಗವಾಯಿಗಳು, ಆಲೂರು ವೆಂಕಟರಾಯರು, ಸುನೀಲ ಜೋಶಿ, ರತನಜಿ ಟಾಟಾ, ಕೆ.ಎಚ್. ಪಾಟೀಲ, ಸಾಲುಮರದ ತಿಮ್ಮಕ್ಕ, ಮಹಾತ್ಮ ಗಾಂಧೀಜಿ, ಹುಯಿಲಗೋಳ ನಾರಾಯಣರಾವ್, ಸಿದ್ದನಗೌಡ ಪಾಟೀಲ, ಭೀಮಸೇನ ಜೋಶಿ, ಕುಮಾರವ್ಯಾಸ, ಗಂಗೂಬಾಯಿ ಹಾನಗಲ್ ಕಲಾಕೃತಿಗಳು ದೇಶದ ಸಂಗೀತ, ಕ್ರೀಡೆ, ಆಧ್ಯಾತ್ಮಿಕ, ಪರಿಸರ ಕ್ಷೇತ್ರದಲ್ಲಿನ ಸಾಧಕರನ್ನು ನೆನಪಿಸುತ್ತಿದ್ದವು. ಮರಳಿನಿಂದ ತಯಾರಿಸಿದ ಲಕ್ಕುಂಡಿಯ ಬ್ರಹ್ಮಜಿನಾಲಯ ಪ್ರತಿಕೃತಿ ಶಿಲ್ಪಕಲೆ ಸಾಹಿತ್ಯವನ್ನು ಬಿಂಬಿಸುತ್ತಿತ್ತು.

ಸ್ವಸಹಾಯ ಗುಂಪಿನ ಮಹಿಳೆಯರು ಸಿದ್ಧಪಡಿಸಿದ ಕಾಟನ್ ಸೀರೆಗಳು, ಸಿದ್ಧ ಉಡುಪುಗಳು, ಖಾರಾ ಮತ್ತು ಸಿಹಿ ತಿನಿಸು, ಅಗರಬತ್ತಿ, ಖಡಕ್ ಜೋಳದ ರೊಟ್ಟಿ, ಅಗಸಿ ಚಟ್ನಿ, ಅರಿಶಿನಪುಡಿ, ಶ್ಯಾವಿಗೆ, ಮಸಾಲಾ ಮಜ್ಜಿಗೆ, ಗೃಹ ಅಲಂಕಾರಿಕ ವಸ್ತುಗಳು, ಲಂಬಾಣಿ ಉಡುಪುಗಳು, ಇಳಕಲ್ ಸೀರೆ, ಚಕ್ಕುಲಿ, ಕೋಡುಬಳಿ, ನಿಪ್ಪಟ್ಟು, ಶೇಂಗಾ ಚಿಕ್ಕಿ, ಮೈಸೂರು ಪಾಕ್, ಹುಣಿಸೆ ಚಿಗಳಿ ಇವುಗಳ ಮಳಿಗೆಗಳು ಗ್ರಾಮೀಣ ಸೊಗಡನ್ನು ಎತ್ತಿ ತೋರಿಸುತ್ತಿದ್ದವು.




ರಂಗೋಲಿಯಲ್ಲಿ ಅರಳಿದ ಕಲಾಕೃತಿಗಳಾದ ದೇಶದ ಅರ್ಥಶಾಸ್ತ್ರಜ್ಞ ಹಾಗೂ ಮಾಜಿ ಪ್ರಧಾನಮಂತ್ರಿ ದಿ. ಮನಮೋಹನ ಸಿಂಗ್, ಸಹಕಾರಿ ರಂಗದ ಭೀಷ್ಮ ದಿ. ಕೆ.ಎಚ್. ಪಾಟೀಲ, ಅಂಧ ಮಕ್ಕಳ ಆಶಾಕಿರಣ ಪಂ. ಪುಟ್ಟರಾಜ ಗವಾಯಿಗಳು ಹಾಗೂ ದೇಶದ ಶ್ರೇಷ್ಠ ಕೈಗಾರಿಕೋದ್ಯಮಿ ರತನ್ ಟಾಟಾ ಅವರ ಕಲಾಕೃತಿಗಳು ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರ ಮೆಚ್ಚುಗೆಗೆ ಪಾತ್ರವಾದವು.

### ಕಣ್ಮನ ಸೆಳೆದ ಫಲಪುಷ್ಪ ಪ್ರದರ್ಶನ

ರಾಜ್ಯ ಸರ್ಕಾರದಿಂದ ಅನುಷ್ಠಾನಗೊಂಡ 5 ಗ್ಯಾರಂಟಿ ಯೋಜನೆಗಳ ಪ್ರದರ್ಶನ ಸಾರ್ವಜನಿಕರಲ್ಲಿ ಅರಿವು ಮೂಡಿಸುತ್ತಿದ್ದವು. ಬೇಟಿ ಬಚಾವೋ ಬೇಟಿ ಪಡಾವೋ ಯೋಜನೆಯು ಹೆಣ್ಣು ಮಕ್ಕಳನ್ನು ರಕ್ಷಿಸಿ ಹೆಣ್ಣು ಮಕ್ಕಳನ್ನು ಓದಿಸಿ ಎಂಬ ಸಂದೇಶ ಸಾರುತ್ತಿತ್ತು. ಪುಷ್ಪಗಳಿಂದ ಅಲಂಕೃತಗೊಂಡ ಸಬರಮತಿ ಆಶ್ರಮದ ಪ್ರತಿಕೃತಿ ಅದರಲ್ಲಿ ಸಿರಿಧಾನ್ಯದಿಂದ ತಯಾರಿಸಿದ 'ನನ್ನ ಜೀವನ ನನ್ನ ಸಂದೇಶ' ಸಾರುವ ಗಾಂಧೀಜಿ ಪ್ರತಿಮೆ ದೇಶಭಕ್ತಿಯನ್ನು ಬಿಂಬಿಸುತ್ತಿತ್ತು.

# ದ್ವಿತೀಯ ಪಿಯುಸಿ ಪರೀಕ್ಷೆ ಸುಗಮ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದಲ್ಲಿ 2024-25ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಶನಿವಾರದಿಂದ ಪ್ರಾರಂಭವಾಗಿದ್ದು, ಯಾವುದೇ ಅಹಿತಕರ ಘಟನೆಗಳಿಲ್ಲದೆ ಸುಸೂತ್ರವಾಗಿ ಜರುಗಿದವು.

ಪಟ್ಟಣದ ಬಿಸಿಎನ್ ಸಂಸ್ಥೆಯ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಹಾಗೂ ಸರಕಾರಿ ಪ.ಪೂ ಕಾಲೇಜಿನ ಪರೀಕ್ಷಾ ಕೇಂದ್ರಗಳಿದ್ದು, ಪರೀಕ್ಷಾ ವಿಭಾಗದ ಅಧೀಕ್ಷಕರು ಸೇರಿದಂತೆ ವಿವಿಧ ಸಿಬ್ಬಂದಿಗಳೊಂದಿಗೆ ಪರೀಕ್ಷಾ ಕೇಂದ್ರದಲ್ಲಿ ಸಕಲ ಸಿದ್ಧತೆಗಳೊಂದಿಗೆ ಪರೀಕ್ಷೆಗಳನ್ನು ಯಶಸ್ವಿಯಾಗಿ ನಿಭಾಯಿಸಲಾಗುತ್ತಿದೆ.

ಪಟ್ಟಣದ ಬಿಸಿಎನ್ ಪದವಿಪೂರ್ವ ಮಹಾವಿದ್ಯಾಲಯದಲ್ಲಿನ ಪರೀಕ್ಷಾ ಕೇಂದ್ರದಲ್ಲಿ ಶನಿವಾರ ನಡೆದ ಪ್ರಥಮ ಭಾಷೆ ಕನ್ನಡ ವಿಷಯಕ್ಕೆ ಒಟ್ಟು 476 ವಿದ್ಯಾರ್ಥಿಗಳಲ್ಲಿ 12 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದು, 464 ವಿದ್ಯಾರ್ಥಿಗಳು ಪರೀಕ್ಷೆ ಬರೆದರು. ಈ ಪರೀಕ್ಷಾ ಕೇಂದ್ರದಲ್ಲಿ ಪುರಸಭೆ ಪ.ಪೂ ಕಾಲೇಜ್, ಎಸ್‌ಎಂ.ಜೆ.ವ್ಹಿ ಪ.ಪೂ ಕಾಲೇಜ್‌ಗಳ ವಿದ್ಯಾರ್ಥಿಗಳು ಮತ್ತು ಸರಕಾರಿ ಪ.ಪೂ ಕಾಲೇಜ್‌ಗಳ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸುತ್ತಿದ್ದಾರೆ. ಇಲ್ಲಿ ಜಾನಾನಾಯಕ್ ಮುಖ್ಯ ಅಧೀಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಇನ್ನೊಂದು ಪರೀಕ್ಷಾ ಕೇಂದ್ರವಾದ ಸರಕಾರಿ ಪ.ಪೂ ಕಾಲೇಜನಲ್ಲಿ ಬಿ.ಸಿ.ಎನ್ ಪ.ಪೂ ಕಾಲೇಜ್ ಹಾಗೂ ಶಿಗ್ಲಿಯ ಸರಕಾರಿ ಪ.ಪೂ ಕಾಲೇಜಿನ ವಿದ್ಯಾರ್ಥಿಗಳು ಈ ಕೇಂದ್ರಗಳಲ್ಲಿ ಪರೀಕ್ಷೆಗೆ ಹಾಜರಾಗಿದ್ದರು. ಇಲ್ಲಿ 380 ವಿದ್ಯಾರ್ಥಿಗಳಲ್ಲಿ 30 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದು 350 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದಾರೆ. ಈ ಕೇಂದ್ರಕ್ಕೆ ಮಂಜುನಾಥ ಕೊಕ್ಕರಗುಂದಿ ಮುಖ್ಯ ಅಧೀಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಪ್ರಾಚಾರ್ಯ ಡಿ.ಎಸ್. ಪ್ಯಾಟಿ ಹಾಜರಿದ್ದರು. ಅಧಿಕಾರಿಗಳಾದ ಮಹೇಶ ಹಡಪದ, ಜಿಲ್ಲಾ ಜಾಗೃತ ದಳದ ಅಧಿಕಾರಿಗಳು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದರು. ಆರೋಗ್ಯ ಇಲಾಖೆ ಹಾಗೂ ಪೊಲೀಸ್ ಇಲಾಖೆಯವರು ಕೇಂದ್ರದಲ್ಲಿದ್ದರು.



# ರಾಷ್ಟ್ರೀಯ ವಿಜ್ಞಾನ ದಿನ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಎಸ್.ಟಿ.ಪಿ.ಎಂ.ಬಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಶನಿವಾರ ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ವಿಜ್ಞಾನ ಪ್ರಯೋಗ ಮತ್ತು ಭಾಷಾ ಕೌಶಲ್ಯ ಪ್ರದರ್ಶನ ಏರ್ಪಡಿಸಲಾಗಿತ್ತು. ಮಕ್ಕಳು ಉತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಿದರು.

ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಮಕ್ಕಳ ಉತ್ಸಾಹ, ಶಿಕ್ಷಕರ ಪ್ರೋತ್ಸಾಹ, ಪಾಲಕರ ಪ್ರವಾಹ ಎಂಬ ವಿನೂತನ ಕಾರ್ಯಕ್ರಮದಡಿಯಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ಸಂದರ್ಭದಲ್ಲಿ ಬಿಆರ್‌ಪಿ ಈಶ್ವರ ಮೇಡ್ಲೇರಿ ಮಾತನಾಡಿ, ಇಂದಿನ ಕಾರ್ಯಕ್ರಮ ವಿಶೇಷವಾಗಿದ್ದು, ಪ್ರಿಕೆಜಿಯಿಂದ 5ನೇ ವರ್ಗದ ವಿದ್ಯಾರ್ಥಿಗಳಿಗೆ ಇಂತಹ ಕಾರ್ಯಕ್ರಮ ನಡೆಸುವುದರಿಂದ ಮಕ್ಕಳಲ್ಲಿ ಶಿಕ್ಷಣದ ಜೊತೆಗೆ ಕೌಶಲ್ಯಗಳು ಮೂಡಿಬರಲು ಸಹಾಯವಾಗುತ್ತದೆ. ಇದು ಮಕ್ಕಳಲ್ಲಿ ಹಾಗೂ ಪಾಲಕರಲ್ಲಿ ಉತ್ಸಾಹ ತುಂಬುವ ಜೊತೆಗೆ ಮಕ್ಕಳಲ್ಲಿ ಆತ್ಮಸ್ಥೈರ್ಯ ಬೆಳೆದು ಮಕ್ಕಳು ತಮ್ಮ ಪ್ರತಿಭೆಯನ್ನು ಪ್ರದರ್ಶಿಸಲು ಸಹಾಯಕವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ದಕ್ಷಿಣ ಕ್ಲಸ್ಟರ್‌ನ ಸಿಆರ್‌ಪಿ ಸತೀಶ ಬೋಮಲೆ ಮಾತನಾಡಿ, ಇಂತಹ ಕಾರ್ಯಕ್ರಮ ಮಾಡುವದರಿಂದ ಪಾಲಕರಲ್ಲಿ ಉತ್ಸಾಹ, ಮಕ್ಕಳಲ್ಲಿ ಧೈರ್ಯ ತುಂಬಿ ಮಕ್ಕಳು ಮುಂದೆ ಬರಲು ಅನುಕೂಲವಾಗುತ್ತದೆ ಎಂದು ತಿಳಿಸಿದರು.

ಮುಖ್ಯ ಶಿಕ್ಷಕಿ ಸ್ವಾತಿ ಪೈ ಮಾತನಾಡಿ, ಶಿಕ್ಷಣದ ಜೊತೆಗೆ ಸಹಪಠ್ಯ ಚಟುವಟಿಕೆ ಮಾಡಿಸುವುದೇ ನಮ್ಮ ಗುರುಬಳಗದ ಮುಖ್ಯ ಉದ್ದೇಶವಾಗಿದ್ದು, ಚಿಕ್ಕ ವಯಸ್ಸಿನಲ್ಲಿಯೇ ಇಂತಹ ಮಹತ್ವವನ್ನು ತಿಳಿಸಿಕೊಡುವ ಕಾರ್ಯವನ್ನು ಸಂಸ್ಥೆಯಲ್ಲಿ ಮಾಡಲಾಗುತ್ತಿದೆ. ಪಾಲಕರು ವಿಶೇಷ ಆಸಕ್ತಿಯಿಂದ ಇದರಲ್ಲಿ ಭಾಗವಹಿಸಿದ್ದಾರೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಿಆರ್‌ಪಿ ಬಿ.ಎಂ. ಯರಗುಪ್ಪಿ, ಉತ್ತರ ಕ್ಲಸ್ಟರ್ ಸಿಆರ್‌ಪಿ ಉಮೇಶ್ ನೇಕಾರ್, ವಕೀಲರಾದ ಬಿ.ಎನ್. ಸಂಶಿ ಉಪಸ್ಥಿತರಿದ್ದರು. ಜ್ಯೋತಿ ಮುಳಗುಂದ, ದೀಪಾ ಆದಿ, ಮಂಜುಳಾ ಪಾಟೀಲ, ವೀಣಾ ಜಾಮನೂರು, ಲೀಲಾ ಬೆಳಗಟ್ಟಿ, ವಿಜಯಲಕ್ಷ್ಮಿ ದೇಸಾಯಿ, ಸಿಮ್ರಾನ್ ನಾಡಿಗೇರ, ವಿಜಯಲಕ್ಷ್ಮಿ ಮಹಾರಾಜಪೇಟ, ಆಶಾ ಜಾದವ್ ಸೇರಿದಂತೆ ಪಾಲಕರು ಹಾಜರಿದ್ದರು.

## ಸ್ವಾಭಿಮಾನಕ್ಕಾಗಿ ದಿಟ್ಟ ಹೋರಾಟದ ಹೃದಯಸ್ಪರ್ಶಿ ಪಯಣ – ಭಾರ್ಗವಿ LL.B

■ 'ಕಲರ್ಸ್ ಕನ್ನಡದಲ್ಲಿ ಬರಲಿರುವ ಭಾರ್ಗವಿಯ ಪರಿಚಯ ■ ಮಾರ್ಚ್ 3 ರಿಂದ ಸೋಮವಾರದಿಂದ – ಶುಕ್ರವಾರ ರಾತ್ರಿ 8.30ಕ್ಕೆ'




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

'ಭಾರ್ಗವಿ LL. B.', ತನ್ನ ತಂದೆಯ ಘನತೆಯನ್ನು ಮರಳಿ ಗಳಿಸಲು ಕಾನೂನಿನ ಪ್ರಪಂಚದಲ್ಲಿ ಎಲ್ಲ ಅಡೆತಡೆಗಳನ್ನು ಮೀರಿ ಬಲಿಷ್ಠ ಪ್ರಭಾವಶಾಲಿಗಳ ವಿರುದ್ಧ ಹೋರಾಡುವ ಧೀರ ಯುವತಿಯ ಸ್ಫೂರ್ತಿದಾಯಕ ಕತೆ.

ಕಲರ್ಸ್ ಕನ್ನಡ, ಸದಾ ಪ್ರೇಕ್ಷಕರ ಹೃದಯವನ್ನು ಮುಟ್ಟುವ ಮನಮಿಡಿಯುವ ಕತೆಗಳ ಮೂಲಕ ಜನಪ್ರಿಯವಾಗಿದೆ. ಇದೀಗ, ನ್ಯಾಯ ಮತ್ತು ಅಧಿಕಾರದ ಮುಖಾಮುಖಿಯಾಗುವ ಹೃದಯಸ್ಪರ್ಶಿ ಕತೆ " 'ಭಾರ್ಗವಿ LL. B.' ಅನ್ನು ಪ್ರೇಕ್ಷಕರಿಗೆ ತಲುಪಿಸುತ್ತಿದೆ. ಈ ಬಹುನಿರೀಕ್ಷಿತ ಧಾರಾವಾಹಿ ಮಾರ್ಚ್ 3 ರಿಂದ ಸೋಮವಾರದಿಂದ – ಶುಕ್ರವಾರ ರಾತ್ರಿ 8.30ಕ್ಕೆ ನಿಮ್ಮ ಕಲರ್ಸ್ ಕನ್ನಡದಲ್ಲಿ ಪ್ರಸಾರಗೊಳ್ಳಲಿದೆ.

ಈ ಕಥೆ, ಧೈರ್ಯಶಾಲಿ ಹಾಗೂ ಮಧ್ಯಮ ವರ್ಗದ ಯುವತಿ ಭಾರ್ಗವಿ ಮತ್ತು ಅತ್ಯಂತ ಪ್ರಭಾವಶಾಲಿ ಮತ್ತು ಬಲಿಷ್ಠ ವಕೀಲ ಜಯಪ್ರಕಾಶ್ ಪಾಟೀಲ್ ನಡುವಿನ ಸ್ವಾಭಿಮಾನದ ಮಹಾ ಸಂಘರ್ಷದ ಕಥೆ ಹೇಳುತ್ತದೆ.

ಭಾರ್ಗವಿಯ ಲಾಯರ್ ತಂದೆಯನ್ನು ಕೋರ್ಟಿನಲ್ಲಿ ಹೀನಾಯವಾಗಿ ಅವಮಾನಿಸಿ ತಲೆ ತಗ್ಗಿಸುವ ಹಾಗೆ ಮಾಡಿ ವಕೀಲಿಕೆಯನ್ನೇ ತ್ಯಜಿಸುವಂತೆ ಮಾಡಿದವನು ಜೆ.ಪಿ. ಪಾಟೀಲ್. ತನ್ನ ವೃತ್ತಿಜೀವನದಲ್ಲಿ ಒಂದೇ ಒಂದು ಸೋಲು ಕಾಣದ, ಗೆಲ್ಲಲು ಯಾವುದೇ ಕಾನೂನನ್ನು ಮುರಿಯುವ ಅವನಿಗೆ ವಕೀಲಿಕೆ ಎಂದರೆ ಅಧಿಕಾರ, ಪ್ರಭಾವ ಮತ್ತು ನಿಯಂತ್ರಕ ಶಕ್ತಿ. ಇದರ ತದ್ವಿರುದ್ಧ ಭಾರ್ಗವಿ. ನ್ಯಾಯ ದೊರಕಿಸಿ ಕೊಡಬೇಕಾದ ಸಂಧರ್ಭ ಬಂದಾಗ ಅವಳು ಯಾರನ್ನಾದರೂ ಎದುರಿಸಬಲ್ಲವಳು. ಅಧಿಕಾರ, ಹಣ, ಪ್ರಭಾವ ಇದ್ಯಾವುದಕ್ಕೂ ಕಿಂಚಿತ್ತೂ ಬೆಲೆ ಕೊಡದ ಅವಳು ನ್ಯಾಯಪರ, ಯಾರಿಗೂ ಹೆದರದ ದಿಟ್ಟ ಯುವತಿ. ತನ್ನ ಪ್ರೀತಿಯ ಅಪ್ಪ ಅಮ್ಮ ಮತ್ತು ತನ್ನ ಪುಟ್ಟ ಕುಟುಂಬವೇ ಅವಳ ಜೀವನ. ಭಾರ್ಗವಿಯ ಅಪ್ಪ ರವೀಂದ್ರ ಭಟ್ಕಳ್ ಕೂಡಾ ವಕೀಲನಾಗಿದ್ದು ವೃತ್ತಿಯಲ್ಲಿ ಯಶಸ್ಸು ಕಂಡಿರುವುದಿಲ್ಲ. ಮಗಳ ಕನಸಿಗೆ ತಂದೆ ಪೂರ್ತಿಯಾಗಿ ಬೆಂಬಲ ನೀಡಿದರೂ ಅಮ್ಮನಿಗೆ ಮಾತ್ರ ಲಾಯರ್ ವೃತ್ತಿ ಅನಗತ್ಯ ತೊಂದರೆಗಳನ್ನು ತರಬಹುದು ಎಂಬ ಆತಂಕ. ಮದುವೆಯಾಗಿ ಅವಳು ಸುಖವಾಗಿದ್ದರೆ ಸಾಕು ಅನ್ನುವುದು ಅಮ್ಮನ ಬಯಕೆ.

ಭಾರ್ಗವಿಯ ಜೀವನ ಅನಿರೀಕ್ಷಿತ ತಿರುವು ಪಡೆಯುವುದು ಅವಳು, ಜೆಪಿ ಪಾಟೀಲ್ ನ ಮಗ ಅರ್ಜುನ್ ಪಾಟೀಲ್ ನನ್ನು ಭೇಟಿ ಮಾಡಿದಾಗ. ಶ್ರೀಮಂತ ಕುಟುಂಬದಲ್ಲಿ ಬೆಳೆದರೂ ಸಹೃದಯಿಯಾಗಿರುವ ಅರ್ಜುನ್ ಭಾರ್ಗವಿಯನ್ನು ಮೊದಲ ನೋಟದಲ್ಲೇ ಪ್ರೀತಿಸುತ್ತಾನೆ. ತನ್ನ ತಂದೆ ವಿರುದ್ಧ ಹೋರಾಟ ಮಾಡುತ್ತಿರುವ ವಕೀಲೆ ಎಂಬ ಅರಿವಿರದ ಅರ್ಜುನ್ ಭಾರ್ಗವಿಗೆ ಹತ್ತಿರವಾಗುತ್ತಾನೆ.

ಇಂಥ ಸನ್ನಿವೇಶದಲ್ಲಿ ತನ್ನ ತಂದೆಯ ಗೌರವವನ್ನು ಮರಳಿ ಗಳಿಸಲು ಮತ್ತು ಅನ್ಯಾಯದ ವಿರುದ್ಧ ಹೋರಾಡಿ ಗೆಲ್ಲಲು ಭಾರ್ಗವಿ ಯಶಸ್ವಿಯಾಗುತ್ತಾಳಾ ಎನ್ನುವುದು 'ಭಾರ್ಗವಿ ಐಐ.ಃ.'ಯ ಮುಖ್ಯ ಕಥಾಹಂದರವಾಗಿದೆ.

'ಭಾರ್ಗವಿ LL. B.' –ಸಾಮಾಜಿಕ ಸಂಘರ್ಷ ಮತ್ತು ಕೌಟುಂಬಿಕ ಕಥನ ಹೊಂದಿರುವ ಅತ್ಯಂತ ಶಕ್ತಿಶಾಲಿಯಾಗಿ ನಿರೂಪಿತವಾಗಿರುವ ಎಲ್ಲರೂ ನೋಡಲೇಬೇಕಾದ ಧಾರಾವಾಹಿಯಾಗಿದೆ. ದಿಟ್ಟ ಭಾರ್ಗವಿ ಪಾತ್ರದಲ್ಲಿ ರಾಧಾ ಭಗವತಿ, ಅರ್ಜುನ್ ಪಾಟೀಲ್ ಪಾತ್ರದಲ್ಲಿ ಮನೋಜ್ ಕುಮಾರ್ ಕನ್ನಡ ಟೆಲಿವಿಶನ್ ಗೆ ಪಾದಾರ್ಪಣೆ ಮಾಡುತ್ತಿದ್ದಾರೆ. ಜೆಪಿ ಪಾಟೀಲ್ ಪಾತ್ರದಲ್ಲಿ ರಂಗಭೂಮಿಯ ಪ್ರಸಿದ್ಧ ಕಲಾವಿದ ಕೀರ್ತಿ ಭಾನು, ಹಾಗೂ ಕನ್ನಡದ ಖ್ಯಾತ ಕಲಾವಿದರಾದ ಅರುಣಾ ಬಾಲರಾಜ್, ಹನುಮಂತೇ ಗೌಡ, ಸುಜಾತಾ ಅಕ್ಷಯ, 'ಮಾಯಾಬಜಾರ್' ಖ್ಯಾತಿಯ ಚೈತ್ರಾ ರಾವ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸುತ್ತಿದ್ದಾರೆ.

'ಅಂತರಪಟ' ಧಾರಾವಾಹಿ ಮೂಲಕ ಶಕ್ತಿಶಾಲಿ ಮಹಿಳಾ ಪಾತ್ರಗಳನ್ನು ತೆರೆಗೆ ತಂದವರು ನಿರ್ಮಾಪಕಿ ಸ್ವಪ್ನ ಕೃಷ್ಣ, 'ಭಾರ್ಗವಿ LL.B.' ಮೂಲಕ ಮತ್ತೊಂದು ಮಹಿಳಾ ಪ್ರಧಾನ ಧಾರಾವಾಹಿಯನ್ನು ಮುಂದಿಡುತ್ತಿದ್ದಾರೆ.

"ಮುಂಗಾರು ಮಳೆ" ಕೃಷ್ಣ ಈ ಶೋಗೆ ಕ್ರಿಯೇಟಿವ್ ಹೆಡ್ ಆಗಿದ್ದಾರೆ. ಸಂಗೀತ ರಚನೆ ಮತ್ತು ಗಾಯನ ಶಶಾಂಕ್ ಶೇಷಗಿರಿ ಅವರದು, ಹಾಗೂ ಪ್ರಮೋದ ಮರವಂತೆ ಮನಸಿಗೆ ಮುಟ್ಟುವಂತಹ ಸಾಹಿತ್ಯ ರಚಿಸಿದ್ದಾರೆ.

ಯಾರಿಗೂ ಹೆದರದ, ಅನ್ಯಾಯಕ್ಕೆ ತಲೆ ಬಾಗದ, ನ್ಯಾಯದ ಹಾದಿಯಲ್ಲಿ ತನ್ನ ತಂದೆಯ ಗೌರವ ಮರಳಿಗಳಿಸಲು ತನ್ನದೇ ಛಾಪು ಮೂಡಿಸಬೇಕು ಅನ್ನುವ ಭಾರ್ಗವಿ ಐಐ.ಃ.' ಯು ಅತ್ಯಂತ ಬಿಗಿಯಾದ ನಿರೂಪಣೆ ಮತ್ತು ಪ್ರಬಲ ತಾರಾಗಣದಿಂದ ಜನರಿಗೆ ಅತ್ಯಂತ ಆಪ್ತವಾಗುವ ಧಾರಾವಾಹಿ.

ಮಾರ್ಚ್ 3 ರಿಂದ ಸೋಮವಾರ-ಶುಕ್ರವಾರ ರಾತ್ರಿ 8:30ಕ್ಕೆ ಕಲರ್ಸ್ ಕನ್ನಡದಲ್ಲಿ ನ್ಯಾಯಕ್ಕಾಗಿ ಹೋರಾಡುವ ದಿಟ್ಟ 'ಭಾರ್ಗವಿ 'LL.B.'ಯ ಸ್ವಾಭಿಮಾನದ ಸಂಘರ್ಷದ ಕತೆ ತಪ್ಪದೆ ನೋಡಿ!

ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಡಂಬಳ – 582113**

ತಾಲೂಕ:ಮುಂಡರಗಿ ಜಿಲ್ಲಾ : ಗದಗ

ಇ-ಮೇಲ್: mun1.dambal.gdg@gmail.com

ಸಂ: ಗ್ರಾ.ಪಂ.ಡಂ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25/01 ದಿನಾಂಕ: 28/02/2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಡಂಬಳ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ. ಸಂ. | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಹೊಸ ಡಂಬಳ ಗ್ರಾಮದ ಮುಂಡರಗಿ ಮುಖ್ಯೆ ರಸ್ತೆಯಿಂದ ಈಶಪ್ಪ ಕರ್ಣಿ ಇವರ ಮನೆಯ ವರೆಗೆ ಗಟಾರ ನಿರ್ಮಾಣ. | 234052.82 | 500.00 | ಖಾಲಿ ಟೆಂಡರ್ ಫಾರಂ ಅನ್ನು ಗ್ರಾಮ ಪಂಚಾಯತಿ ಯಿಂದ ಪಡೆದು ಸಲ್ಲಿಸುವುದು |
| 2 | ಹೊಸ ಡಂಬಳ ಗ್ರಾಮದ ಮುಂಡರಗಿ ಮುಖ್ಯೆ ರಸ್ತೆಯಿಂದ ಮಂಜುನಾಥ ಪೂಜಾರ ಇವರ ಮನೆಯ ವರೆಗೆ ಗಟಾರ ನಿರ್ಮಾಣ. | 234052.82 | 500.00 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರ್ಮಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ: **05/03/2025** ರಿಂದ **20/03/2025** ರವರೆಗೆ ಭರ್ತಿ ಮಾಡಿದ ದರ ಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: **21-03-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30** ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ ಸಮಯ: **21-03-2025 ರ ಮಧ್ಯಾಹ್ನ 3.00** ಗಂಟೆಗೆ.

**ನಿಬಂಧನೆಗಳು:** ಷರತ್ತು/ನಿಬಂಧನೆಗಳಿಗೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಡಂಬಳದಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ/-ಪಂಚಾಯತ ಅಭಿವೃದ್ಧಿ ಅದಿಕಾರಿಗಳು ಗ್ರಾಮ ಪಂಚಾಯತ ಡಂಬಳ

ಸಹಿ/-ಅಧ್ಯಕ್ಷರು ಗ್ರಾಮ ಪಂಚಾಯತ ಡಂಬಳ

ವಾ.ಸಾ.ಇ/ಗದಗ/654/ದೇಶಪಾಂಡೆಪಬ್ಲಿಸಿಟಿ/2024-25

**ರಾಷ್ಟ್ರೀಯ ಶ್ರವಣದೋಷ ನಿಯಂತ್ರಣ ಮತ್ತು ನಿವಾರಣಾ ಕಾರ್ಯಕ್ರಮ**

**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಇಲಾಖೆ, ಗದಗ**

**ಜಿಲ್ಲಾ ಪಂಚಾಯತ್, ಗದಗ ಜಿಲ್ಲೆ.**

**ವಿಶ್ವ ಶ್ರವಣ ದಿನ – 3 ನೇ ಮಾರ್ಚ್–2025**

**ಘೋಷಣೆ: "ಬದಲಾಗುತ್ತಿರುವ ಮನಸ್ಥಿತಿ: ಕಿವಿ ಮತ್ತು ಶ್ರವಣ ಆರೈಕೆಯನ್ನು ಎಲ್ಲರಿಗೂ ವಾಸ್ತವವಾಗಿಸಲು ನಿಮ್ಮನ್ನು ಸಶಕ್ತಗೊಳಿಸಿಕೊಳ್ಳಿ!"**

**ನಿಮ್ಮ ಕಿವಿಯ ಬಗ್ಗೆ ನಿಮಗೆ ಎಷ್ಟು ತಿಳಿದಿದೆ ?**

ಶ್ರವಣ ಶಕ್ತಿ (ಕೇಳುವಿಕೆ) ನಮ್ಮೆಲ್ಲರ ಜೀವನದ ಅವಿಭಾಜ್ಯ ಅಂಗ. ನೀವು ಒಂದು ಕ್ಷಣ ಶಬ್ದಗಳೇ ಇಲ್ಲದ ಪ್ರಪಂಚವನ್ನು ಊಹಿಸಿಕೊಳ್ಳಿ. ನಾವು ಯಾರೊಂದಿಗೂ ನಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳಲು ಸಾಧ್ಯವಿಲ್ಲ. ನಮ್ಮ ಮನಸ್ಸಿನ ಸಂತೋಷಕ್ಕಾಗಿ ಸಂಗೀತವನ್ನು ಆಲಿಸಲಾಗುವುದಿಲ್ಲ. ಆಗ ಹುಟ್ಟಿದ ಮಕ್ಕಳು ನಾವು ಮಾತನಾಡುವ ಮಾತುಗಳನ್ನು ಕೇಳದಿದ್ದರೆ ಅದನ್ನು ಕಲಿಯಲಾರದೇ ಮೂಖರಾಗಿ ಉಳಿದು ಬಿಡುತ್ತಾರೆ. ಇಷ್ಟೆಲ್ಲ ನಮ್ಮ ಜೀವನದಲ್ಲಿ ಬೆರೆತಿರುವ ಶ್ರವಣ ಶಕ್ತಿಯನ್ನು ಉಳಿಸಿಕೊಳ್ಳುವುದು ಬಹು ಮುಖ್ಯವಲ್ಲವೇ? ಅದಕ್ಕಾಗಿ ಕೆಲ ಸಲಹೆಗಳು ಈ ಕೆಳಗಿನಂತಿವೆ. ಇವುಗಳನ್ನು ಪಾಲಿಸಿ, ಅಮೂಲ್ಯವಾದ ಶ್ರವಣ ಶಕ್ತಿಯನ್ನು ಕಾಪಾಡಿಕೊಳ್ಳಿ.

- ಎಲ್ಲಾ ನವಜಾತ ಶಿಶುಗಳು ಜನಿಸಿದ ಕೂಡಲೇ ಸಮೀಪದ ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿ ಅಥವಾ ಜಿಲ್ಲಾ ಆಸ್ಪತ್ರೆಯಲ್ಲಿ ಕಡ್ಡಾಯವಾಗಿ ಶ್ರವಣದೋಷ ತಪಾಸಣೆಯನ್ನು ಮಾಡಿಸಬೇಕು.
- ಗಂಡಾಂತರ ಗರ್ಭಿಣಿಯರ ಹಾಗೂ ಹೆರಿಗೆ ಸಮಯದಲ್ಲಿ ತೊಂದರೆಯಿಂದ ಜನಿಸಿದ ನವಜಾತ ಶಿಶುಗಳ ಶ್ರವಣದೋಷ ತಪಾಸಣೆಯನ್ನು ತಪ್ಪದೇ ಕಡ್ಡಾಯವಾಗಿ ಮಾಡಿಸಬೇಕು.
- ಕಿವಿಗಳಲ್ಲಿ ಕಡ್ಡಿ ಮೊನಾಚಾದ (ಚೂಪಾದ) ವಸ್ತುಗಳು, ಎಣ್ಣೆ, ನೀರು ಹಾಕಬಾರದು ಹಾಗೂ ಹತ್ತಿ ಕಡ್ಡಿ (ಇಯರ್ ಬಡ್ಸ್) ಗಳಿಂದ ಸ್ವಚ್ಛಗೊಳಿಸಲು ಪ್ರಯತ್ನಿಸಬಾರದು.
- ಅತ್ಯಂತ ಜೋರಾದ ಅಥವಾ ಕರ್ಕಶ ಶಬ್ದಗಳಿಂದ (ಉದಾ: ಪಟಾಕಿ ಶಬ್ದ, ಸಭೆ ಸಮಾರಂಭಗಳಲ್ಲಿನ ಧ್ವನಿ ವರ್ದಕಗಳು ಇತ್ಯಾದಿ) ಕಿವಿಗಳನ್ನು ರಕ್ಷಿಸಿಕೊಳ್ಳಬೇಕು.
- ಗದ್ದಲವಿರುವ ಪ್ರದೇಶ ಅಥವಾ ಕೆಲಸದ ಸ್ಥಳಗಳಲ್ಲಿ (ಉದಾ: ಕಾರ್ಖಾನೆಗಳು, ಬಸ್ ಚಾಲನೆ ಮಾಡುವಾಗ, ರೈಸ್ ಮಿಲ್‌ಗಳು, ಇತ್ಯಾದಿಗಳಲ್ಲಿ), ಕಿವಿಯ ರಕ್ಷಾ ಕವಚ (ಇಯರ್ ಪ್ಲಗ್ಸ್) ಗಳನ್ನು ಧರಿಸಿ ಕೆಲಸ ನಿರ್ವಹಿಸಬೇಕು.
- ಕಿವಿ ಸೋಂಕು (ಕಿವಿ ನೋವು, ಸೋರುವಿಕೆ) ಕಂಡು ಬಂದಲ್ಲಿ ತಕ್ಷಣವೇ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳನ್ನು ಸಂಪರ್ಕಿಸುವುದು ಅಥವಾ ಅವಶ್ಯವಿದ್ದಲ್ಲಿ ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಅಥವಾ ಜಿಲ್ಲಾ ಆಸ್ಪತ್ರೆಯಲ್ಲಿರುವ ಕಿವಿ, ಮೂಗು, ಗಂಟಲು ತಜ್ಞವೈದ್ಯರನ್ನು ಕೂಡಲೇ ಸಂಪರ್ಕಿಸುವುದು.
- ತಜ್ಞರು ಸೂಚಿಸಿದ ಶ್ರವಣ ಯಂತ್ರಗಳನ್ನು ಮಾತ್ರ ಉಪಯೋಗಿಸುವುದು, ಅವಶ್ಯವಿದ್ದಲ್ಲಿ ವಾಕ್/ಭಾಷಾ ಚಿಕಿತ್ಸೆಗೆ ತಜ್ಞರಲ್ಲಿ ಸಲಹೆ ಪಡೆಯುವುದು.

**ಹೆಚ್ಚಿನ ವಿವರಗಳಿಗಾಗಿ, ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರಗಳಿಗೆ ಭೇಟಿ ನೀಡಿ.**

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka